ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com | ಸಂಪುಟ: 01 ಸಂಚಿಕೆ: 199
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಶುಕ್ರವಾರ: 17-07-2026

# 3-4 ದಿನಗಳಲ್ಲಿ ಹೊಸ ಸಚಿವರ ಪಟ್ಟಿ; 20 ಸ್ಥಾನಗಳಿಗೆ 40ಕ್ಕೂ ಹೆಚ್ಚು ಶಾಸಕರ ಪೈಪೋಟಿ

**ಬೆಂಗಳೂರು, ಜು. 16–** ರಾಜ್ಯ ಸಚಿವ ಸಂಪುಟ ವಿಸ್ತರಣೆ ಸನ್ನಿಹಿತವಾಗಿದ್ದು, ಸಚಿವರ ಪಟ್ಟಿಗೆ ಅಂತಿಮ ರೂಪ ಕೊಡುವ ಕಾರ್ಯ ದೆಹಲಿಯಲ್ಲಿ ನಡೆದಿದ್ದು, ಇನ್ನು 3–4 ದಿನಗಳಲ್ಲಿ ಸಂಪುಟ ವಿಸ್ತರಣೆಯಾಗುವುದು ಬಹುತೇಕ ನಿಶ್ಚಿತ.

ರಾಜ್ಯ ಸಚಿವ ಸಂಪುಟ ವಿಸ್ತರಣೆ ಬಗ್ಗೆ ದೆಹಲಿಯಲ್ಲಿಂದು ಕಾಂಗ್ರೆಸ್ ಪಕ್ಷದ ಉನ್ನತ ಮಟ್ಟದ ಸಭೆ ನಡೆದಿದ್ದು, ಈ ಸಭೆಯಲ್ಲಿ ಸಚಿವರ ಪಟ್ಟಿಗೆ ಅಂತಿಮ ರೂಪ ನೀಡಲಾಗುತ್ತದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ನೇತೃತ್ವದಲ್ಲಿ ನಡೆದಿರುವ ಸಭೆಯಲ್ಲಿ ರಾಜ್ಯ ಸಚಿವ ಸಂಪುಟವನ್ನು ವಿಸ್ತರಿಸಿ, ಯಾರನ್ನು ಸಚಿವರನ್ನಾಗಿಸಬೇಕು ಎಂಬ ಬಗ್ಗೆ ವಿಸ್ತೃತ ಚರ್ಚೆ ನಡೆದಿದ್ದು, ಸಚಿವರ ಪಟ್ಟಿಯನ್ನು ಸಿದ್ಧಗೊಳಿಸಿ ಅಂತಿಮವಾಗಿ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರ ಅನುಮೋದನೆ ಪಡೆದು ಹೈಕಮಾಂಡ್ ಸಚಿವರ ಪಟ್ಟಿಯನ್ನು ಬಿಡುಗಡೆ ಮಾಡಲಿದೆ.

ಸಚಿವರ ಪಟ್ಟಿಗೆ ಇಂದು ಅಂತಿಮ ರೂಪ ಸಿಗುವುದು ಬಹುತೇಕ ಪಕ್ಕ ಆಗಿದ್ದು, ಇನ್ನು 3–4 ದಿನಗಳಲ್ಲಿ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗಲಿದೆ.

ಸಂಪುಟ ವಿಸ್ತರಣೆಯ ಬಗ್ಗೆ ವರಿಷ್ಠರೊಂದಿಗೆ ಚರ್ಚಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಇವರುಗಳು ನಿನ್ನೆ ರಾತ್ರಿಯೇ ದೆಹಲಿಗೆ ತೆರಳಿದ್ದಾರೆ. ಇವರೆಲ್ಲಾ ಇಂದು ಬೆಳಿಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ನೇತೃತ್ವದಲ್ಲಿ ನಡೆದಿರುವ ಉನ್ನತ ಮಟ್ಟದಲ್ಲಿ ಸಭೆಯಲ್ಲಿ ಭಾಗಿಯಾಗಿ ಯಾರನ್ನು ಸಚಿವರನ್ನಾಗಿಸಬೇಕು ಎಂಬ ಬಗ್ಗೆ ಚರ್ಚೆ ನಡೆಸಿದ್ದಾರೆ.

ಈ ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಇವರುಗಳು ಭಾಗಿಯಾಗಿದ್ದು, ಎಲ್ಲರೂ ಚರ್ಚಿಸಿ ಸಚಿವರ ಪಟ್ಟಿಯನ್ನು ಸಿದ್ಧಗೊಳಿಸುವರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇವರುಗಳು ತಮ್ಮ ಕಡೆಯಿಂದ ಯಾರನ್ನು ಸಚಿವರನ್ನಾಗಿಸಬೇಕು ಎಂಬ ಪಟ್ಟಿಯನ್ನು ಹೈಕಮಾಂಡ್ ಮುಂದೆ



ಇಂದು ಇಡಲಿದ್ದಾರೆ. ಎಲ್ಲಾ ಹೆಸರುಗಳ ಬಗ್ಗೆ ಚರ್ಚಿಸುವ ಹೈಕಮಾಂಡ್ ಇಬ್ಬರು ನಾಯಕರುಗಳಿಂದ ಸಚಿವರ ಪಟ್ಟಿಯನ್ನು ತೆಗೆದುಕೊಂಡು ಅಂತಿಮವಾಗಿ ತಾನೇ ಕುಳಿತು ಸಚಿವರ ಪಟ್ಟಿಗೆ ಮೋಕ್ಷ ನೀಡಲಿದೆ.

ಇಂದಿನ ಉನ್ನತ ಮಟ್ಟದ ಸಭೆಯ ನಂತರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ರಾಹುಲ್‌ಗಾಂಧಿಯವರೊಂದಿಗೆ ಚರ್ಚಿಸಿ ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವರು. ಇದಾದ ಬಳಿಕವೇ ಸಚಿವರ ಪಟ್ಟಿ ಬಿಡುಗಡೆಯಾಗಲಿದೆ.

ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರು ಡೆಹ್ರಾಡೂನ್ ನಲ್ಲಿ ನಡೆದಿರುವ ನೀಟ್ ಅಕ್ರಮ ವಿರೋಧಿ ಸಮಾವೇಶದಲ್ಲಿ ಪಾಲ್ಗೊಳ್ಳಲು ಡೆಹರಾಡೂನ್‌ಗೆ ತೆರಳಿದ್ದು, ಅವರ ಅನುಪಸ್ಥಿತಿಯಲ್ಲೇ ಉನ್ನತ ಮಟ್ಟದ ಸಭೆ ನಡೆದಿದ್ದು, ರಾಹುಲ್‌ಗಾಂಧಿ ವಾಪಸ್ಸಾದ ಬಳಿಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ರಾಹುಲ್‌ಗಾಂಧಿಯವರ ಮುಂದೆ ಸಚಿವರ ಪಟ್ಟಿಯನ್ನು ಇಟ್ಟು, ಅದಕ್ಕೆ ಅವರ ಅನುಮೋದನೆ ಪಡೆದು, ನಂತರ ಸಚಿವರ ಪಟ್ಟಿಯನ್ನು ಬಿಡುಗಡೆ ಮಾಡುವರು ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

ಹೊಸಬರಿಗೆ ಆದ್ಯತೆ: ಈ ಹಿಂದೆ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿದ್ದ 11 ಸಚಿವರನ್ನು ಸಂಪುಟದಲ್ಲಿ ಮುಂದುವರೆಸಲಾಗಿದ್ದು, ಈಗ ಸಿದ್ದರಾಮಯ್ಯ ಸಂಪುಟದಲ್ಲಿದ್ದ ಐದಾರು ಸಚಿವರಿಗಷ್ಟೇ ಮತ್ತೆ ಸಚಿವರಾಗುವ ಭಾಗ್ಯ ಸಿಗಲಿದ್ದು, ಉಳಿದಂತೆ ಹೊಸ ಮುಖಗಳಿಗೆ ಹೆಚ್ಚಿನ ಆದ್ಯತೆ ಸಿಗುವ ಸಾಧ್ಯತೆಗಳು ಹೆಚ್ಚಿವೆ.

ಸಚಿವ ಸಂಪುಟದಲ್ಲಿ 20 ಸ್ಥಾನಗಳು ಖಾಲಿಯಿದ್ದು, ಈ ಇಪ್ಪತ್ತು ಸ್ಥಾನಗಳಲ್ಲಿ ಕನಿಷ್ಠ 10 ರಿಂದ 12 ಮಂದಿ ಹೊಸಬರಿಗೆ ಸಚಿವ ಪಟ್ಟ ಸಿಗುವುದು ಬಹುತೇಕ ನಿಶ್ಚಿತ ಎಂದು ಹೇಳಲಾಗಿದೆ.

ಖಾಲಿ ಇರುವ 20 ಸ್ಥಾನಗಳಿಗೆ 40ಕ್ಕೂ ಹೆಚ್ಚು ಶಾಸಕರು ಪೈಪೋಟಿ ನಡೆಸಿದ್ದು, ಯಾರನ್ನು ಸಚಿವರನ್ನಾಗಿಸಬೇಕು ಎಂಬುದು ಹೈಕಮಾಂಡ್‌ಗೆ ಸ್ವಲ್ಪಮಟ್ಟಿಗೆ ತಲೆನೋವು ತಂದಿದೆಯಾದರೂ ರಾಹುಲ್‌ಗಾಂಧಿಯವರ ಗಮನಕ್ಕೆ ಎಲ್ಲವನ್ನು ತಂದು ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಾಗುತ್ತದೆ.

ಪ್ರಾದೇಶಿಕವಾರು, ಜಾತಿವಾರು, ಹಿರಿತನ ಎಲ್ಲವನ್ನು ಗಣನೆಗೆ ತೆಗೆದುಕೊಂಡಿರುವ ಹೈಮಾಕಂಡ್ ಅಳೆದು ತೂಗಿ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಿದ್ದು, ಬಹುತೇಕ ಭಾನುವಾರದ ಹೊತ್ತಿಗೆ ಸಚಿವರ ಪಟ್ಟಿಯನ್ನು ಬಿಡುಗಡೆ ಮಾಡಲಿದೆ.

ಸೋಮವಾರ ಇಲ್ಲವೇ ಮಂಗಳವಾರ ನೂತನ ಸಚಿವರ ಪದಗ್ರಹಣ ಕಾರ್ಯಕ್ರಮ ನಡೆಯುವ ಸಾಧ್ಯತೆಗಳು ಹೆಚ್ಚಿವೆ.

ದೆಹಲಿಯಲ್ಲಿ ಬೀಡು ಬಿಟ್ಟ ಸಚಿವಕಾಂಕ್ಷಿ ಶಾಸಕರು

ಶತಾಯ ಗತಾಯ ಸಚಿವ ಸ್ಥಾನ ಪಡೆಯಲೇಬೇಕು ಎಂದು ಸುಮಾರು 25ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲೇ ಬೀಡು ಬಿಟ್ಟಿದ್ದು, ಹೈಕಮಾಂಡ್‌ನಲ್ಲಿರುವ ತಮ್ಮ ಗಾಡ್ ಫಾದರ್‌ಗಳ ಮೂಲಕ ಒತ್ತಡ ಹೇರಿ ಸಚಿವ ಸ್ಥಾನ ಗಿಟ್ಟಿಸಿಕೊಳ್ಳುವ ಪ್ರಯತ್ನವನ್ನು ಹಲವು ಶಾಸಕರು ನಡೆಸಿದ್ದಾರೆ.

ಸಚಿವ ಸಂಪುಟದಲ್ಲಿ ನಾಲ್ಕೈದು ಬಾರಿ ಗೆದ್ದವರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂಬ ಕೂಗು ಸಹ ಇದ್ದು, ಹಾಗೆಯೇ ಹೊಸ ಮುಖಗಳಿಗೆ ಅದರಲ್ಲೂ ಯುವಕರಿಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಕಾಂಗ್ರೆಸ್‌ನ 2ನೇ ಸಾಲಿನಲ್ಲಿರುವ ಯುವ ನಾಯಕರುಗಳು ಹೈಕಮಾಂಡ್ ಮೇಲೆ ಒತ್ತಡ ಹೇರಿದ್ದಾರೆ. ಹಾಗಾಗಿ ಈ ಬಾರಿಯ ಸಂಪುಟ ವಿಸ್ತರಣೆಯಲ್ಲಿ ಹೊಸ ಮುಖಗಳಿಗೆ ಹೆಚ್ಚಿನ ಆದ್ಯತೆ ಸಿಗುವ ಸಾಧ್ಯತೆಗಳು ಇವೆ.

ಯಾರಿಗೆಲ್ಲಾ ಸಚಿವ ಸ್ಥಾನ ಸಿಗಲಿದೆ ಎಂಬುದು ಇನ್ನೆರಡು ದಿನಗಳಲ್ಲಿ ಗೊತ್ತಾಗಲಿದೆ.

# ಬರ : ನೆರವು ಕೋರಿ ಮೋದಿಗೆ ಡಿಸಿಎಂ ಪತ್ರ



**ಬೆಂಗಳೂರು, ಜು. 16:** ರಾಜ್ಯದಲ್ಲಿ ಪ್ರಸಕ್ತ ವರ್ಷ ನೈಋತ್ಯ ಮುಂಗಾರು ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಭೀಕರ ಬರ ಪರಿಸ್ಥಿತಿ ತಲೆದೋರಿದ್ದು, ತಕ್ಷಣವೇ ಮಧ್ಯಪ್ರವೇಶಿಸಿ ಎನ್‌ಡಿಆರ್‌ಎಫ್ ನಿಯಮಗಳನ್ನು ಸಡಿಲಗೊಳಿಸುವ ಮೂಲಕ ಹೆಚ್ಚಿನ ಆರ್ಥಿಕ ನೆರವು ನೀಡಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ತಲೆದೋರಿರುವ ತೀವ್ರ ಮಳೆ ಕೊರತೆ, ಕೃಷಿ ಬಿಕ್ಕಟ್ಟು ಹಾಗೂ ಕುಡಿಯುವ ನೀರಿನ ಆತಂಕದ ಕುರಿತು ಜುಲೈ 15ರಂದು ಪ್ರಧಾನಿಗಳಿಗೆ ಸುದೀರ್ಘ ಪತ್ರ ಬರೆದಿರುವ ಡಿಸಿಎಂ, ತುರ್ತು ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯದ ಗ್ರಾಮೀಣ ಆರ್ಥಿಕತೆ ಮತ್ತು ಕೃಷಿ ವಲಯ ಮಳೆಯಿಲ್ಲದೆ ತತ್ತರಿಸುತ್ತಿದ್ದು, ಅಂಕಿ–ಅಂಶಗಳು ಪರಿಸ್ಥಿತಿಯ ಗಂಭೀರತೆಯನ್ನು ಬಿಂಬಿಸುತ್ತಿವೆ ಎಂದು ಪತ್ರದಲ್ಲಿ ವಿವರಿಸಲಾಗಿದೆ.ರಾಜ್ಯಾದ್ಯಂತ ಜೂನ್ ಮಳೆ ಕೊರತೆ: ಶೇಕಡಾ 42,ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೊರತೆ: ಶೇಕಡಾ 36,ಜುಲೈ ತಿಂಗಳ ಒಟ್ಟಾರೆ ಕೊರತೆ: ಶೇಕಡಾ 34.

ರಾಜಧಾನಿ ಬೆಂಗಳೂರಿನಲ್ಲಿ ಕೊರತೆ: ಶೇಕಡಾ 34ಕುಡಿಯುವ ನೀರಿಗೆ ಆಹಾಕಾರ, ಅಂತರ್ಜಲ ಕುಸಿತವಾಗಿದ್ದುರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಪಾತಾಳಕ್ಕೆ ಕುಸಿದಿದ್ದು, ಗ್ರಾಮೀಣ ಭಾಗ ಮಾತ್ರವಲ್ಲದೆ ರಾಜಧಾನಿ ಬೆಂಗಳೂರಿನಲ್ಲೂ ಕುಡಿಯುವ ನೀರಿನ ತೀವ್ರ ಬಿಕ್ಕಟ್ಟು ಸೃಷ್ಟಿಯಾಗುತ್ತಿದೆ. ಕೃಷಿ ಚಟುವಟಿಕೆಗಳು ಸಂಪೂರ್ಣ ಸ್ಥಗಿತಗೊಳ್ಳುವ ಹಂತಕ್ಕೆ ತಲುಪಿದ್ದು, ರೈತರ ಜೀವನೋಪಾಯಕ್ಕೆ ಧಕ್ಕೆಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಇರುವ ಎನ್‌ಡಿಆರ್‌ಎಫ್ (ರಾಷ್ಟ್ರೀಯ ವಿಪತ್ತು ಸ್ಪಂದನಾ ನಿಧಿ) ಮಾನದಂಡಗಳ ಪ್ರಕಾರ ಬರ ಘೋಷಣೆ ಮಾಡುವುದು ಸವಾಲಿನ ಕೆಲಸವಾಗಿದೆ. ಹಾಗಾಗಿ ಪ್ರಸಕ್ತ ಪರಿಸ್ಥಿತಿಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ನಿಯಮಗಳನ್ನು ಸಡಿಲಗೊಳಿಸಬೇಕು ಮತ್ತು ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಡಾ. ಜಿ. ಪರಮೇಶ್ವರ್ ಅವರು ಪ್ರಧಾನಿ ಮೋದಿ ಅವರಿಗೆ ಬರೆದ ಪತ್ರದಲ್ಲಿ ಪ್ರಮುಖವಾಗಿ ಉಲ್ಲೇಖಿಸಿದ್ದಾರೆ.

# ಸಿರವಾರ ಪಟ್ಟಣದ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹ; ನಿರ್ಲಕ್ಷ್ಯ ವಹಿಸಿದರೆ ಉಗ್ರ ಹೋರಾಟದ ಕನ್ನಡ ಸೇನೆ ವತಿಯಿಂದ ಎಚ್ಚರಿಕೆ

ಧೈರ್ಯದ ದಾರಿ



**ಸಿರವಾರ:** ಸಿರವಾರ ಪಟ್ಟಣ ಪಂಚಾಯಿತಿಯಲ್ಲಿ ಶಾಶ್ವತ ಮುಖ್ಯ ಅಧಿಕಾರಿಗಳಿಲ್ಲದೆ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಅಭಿವೃದ್ಧಿ ಕಾರ್ಯಗಳು ಮರೀಚಿಕೆಯಾಗಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವವರೇ ಇಲ್ಲದಂತಾಗಿದೆ ಎಂದು ಆರೋಪಿಸಿರುವ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಪದಾಧಿಕಾರಿಗಳು, ಜಿಲ್ಲಾಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಸಮಸ್ಯೆಗಳನ್ನು ಬಗೆಹರಿಸದಿದ್ದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಪ್ರಮುಖ ಬೇಡಿಕೆಗಳು:

ಶಾಶ್ವತ ಅಧಿಕಾರಿಗಳ ನೇಮಕ: ಪಟ್ಟಣ ಪಂಚಾಯಿತಿಯಲ್ಲಿ ಶಾಶ್ವತ ಮುಖ್ಯ ಅಧಿಕಾರಿಗಳಿಲ್ಲದ ಕಾರಣ ದೈನಂದಿನ ಆಡಳಿತ ಮತ್ತು ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಕುಂಠಿತಗೊಂಡಿವೆ. ತಕ್ಷಣವೇ ಶಾಶ್ವತ ಅಧಿಕಾರಿಯನ್ನು ನೇಮಿಸಬೇಕು.

ಬರ ಘೋಷಣೆ: ಸಿರವಾರ ತಾಲೂಕಿನಲ್ಲಿ ಮಳೆಯ ತೀವ್ರ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದಾರೆ. ತಕ್ಷಣವೇ ತಾಲೂಕನ್ನು 'ಬರ ಪೀಡಿತ' ಎಂದು ಘೋಷಿಸಿ, ಅಗತ್ಯವಿರುವ ಕಡೆ ಗಂಜಿ ಕೇಂದ್ರಗಳನ್ನು ತೆರೆಯಬೇಕು.

ಕುಡಿಯುವ ನೀರಿನ ಸಮಸ್ಯೆ: ಪಟ್ಟಣ ಪಂಚಾಯಿತಿ ವ್ಯಾಪ್ತಿಯ 20 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದೆ. ನಾಗರಿಕರ ಮೂಲಭೂತ ಹಕ್ಕಾದ ಕುಡಿಯುವ ನೀರನ್ನು ಪೂರೈಸಲು ಶಾಶ್ವತ ಯೋಜನೆಯನ್ನು ರೂಪಿಸಬೇಕು.

ಪೌರಕಾರ್ಮಿಕರ ಸುರಕ್ಷತೆ: ಪಟ್ಟಣದ ಸ್ವಚ್ಛತೆಗೆ ಶ್ರಮಿಸುವ ಪೌರಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ, ಅವರಿಗೆ ತಕ್ಷಣವೇ ಗ್ಲೌಸ್, ಮಾಸ್ಕ್ ಮತ್ತು ಶೂಗಳನ್ನು ಒಳಗೊಂಡ ಸುರಕ್ಷತಾ ಕಿಟ್‌ಗಳನ್ನು ವಿತರಿಸಬೇಕು.

ರಸ್ತೆ ಬದಿಯಲ್ಲಿ ಗಿಡ ನೆಡುವಿಕೆ: ರಾಯಚೂರು–ಲಿಂಗಸುಗೂರು ರಸ್ತೆಯ ಬದಿಯಲ್ಲಿ ಪರಿಸರ ಸಂರಕ್ಷಣೆ ಮತ್ತು ಸೌಂದರ್ಯೀಕರಣಕ್ಕಾಗಿ ಮರಗಳನ್ನು ನೆಟ್ಟು, ಅವುಗಳ ರಕ್ಷಣೆಗೆ ಟೀ–ಗಾರ್ಡ್‌ಗಳನ್ನು ಅಳವಡಿಸಬೇಕು.

ಸಿಬ್ಬಂದಿ ವರ್ಗಾವಣೆ: ಆಡಳಿತದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು, ಕಳೆದ 10 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಟ್ಟಣ ಪಂಚಾಯಿತಿ ಸಿಬ್ಬಂದಿಯನ್ನು ತಕ್ಷಣ ಬೇರೆಡೆ ವರ್ಗಾಯಿಸಬೇಕು.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿರುವ ಕನ್ನಡ ಸೇನೆ ಕರ್ನಾಟಕದ ತಾಲೂಕಾ ಅಧ್ಯಕ್ಷರಾದ ಮೌನೇಶ ಪಿತಗಲ್, ಗೌರವ ಅಧ್ಯಕ್ಷರಾದ ಸತ್ತರ್ ಸಾಬ್ ಗುತ್ತೇದಾರ್, ಸಂಚಾಲಕರಾದ ಎಚ್. ಚಂದ್ರಶೇಖರ್, ಉಪಾಧ್ಯಕ್ಷರಾದ ಯೇಸುಮಿತ್ರ ಮಚ್ಚಿ, ಜಂಟಿ ಕಾರ್ಯದರ್ಶಿ ಅಮರೇಶ್ ಕನಸವಿ, ಖಜಾಂಚಿ ರಾಜು ಭೋವಿ ಹಾಗೂ ಸದಸ್ಯ ಇಸ್ಮಾಯಿಲ್ ಅನೋಕ ಅವರು, ತಮ್ಮ ಬೇಡಿಕೆಗಳ ಈಡೇರಿಕೆಗೆ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳದಿದ್ದರೆ ಹೋರಾಟ ಅನಿವಾರ್ಯ ಎಂದು ಸ್ಪಷ್ಟಪಡಿಸಿದ್ದಾರೆ.

# ಅರಕೇರಾದಲ್ಲಿ ಜಗದೀಶಪ್ಪ ಬಿ.ಗಣೇಕಲ್ ಅವರಿಗೆ ಆತ್ಮೀಯ ಸನ್ಮಾನ



**ಅರಕೇರಾ;** ಜ್ಞಾನದ ದೀವಿಗೆಯಾಗಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿದ ಪ್ರೌಢಶಾಲಾ ಶಿಕ್ಷಕರಾದ ಜಗದೀಶಪ್ಪ ಬಿ.ಗಣೇಕಲ್ ಅವರು ಇತ್ತೀಚಿಗೆ ತಮ್ಮ ಸುದೀರ್ಘ ಸೇವೆಯಿಂದ ವಯೋನಿವೃತ್ತಿ ಹೊಂದಿದರು.

ಅವರ ನಿವೃತ್ತಿ ಜೀವನಕ್ಕೆ ಶುಭಕೊರುವ ಹಾಗೂ ಅವರ ಸೇವೆಗೆ ಕೃತಜ್ಞತೆ ಸಲ್ಲಿಸುವ ಸಲ್ಲುವಾಗಿ ಅರಕೇರಾದಲ್ಲಿನ ಶ್ರೀಸೂಗೂರೇಶ್ವರ ಯುವ ಸಂಘದವತಿಯಿಂದ ಆತ್ಮೀಯ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಸನ್ಮಾನವನ್ನು ಶ್ರೀಸೂಗೂರೇಶ್ವರ ಯುವ ಸಂಘದ ಕಾರ್ಯದರ್ಶಿಗಳಾದ ಚನ್ನವೀರಯಸ್ವಾಮಿ ಹಿರೇಮಠ ಅವರು ಜಗದೀಶಪ್ಪ ಬಿ.ಗಣೇಕಲ್ ಅವರನ್ನು ಸನ್ಮಾನಿಸಿಗೌರವಿಸಿದರು. ಶಿಕ್ಷಣ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ವಿದ್ಯಾರ್ಥಿಗಳಲ್ಲಿ ಜ್ಞಾನದ ಹಸಿವನ್ನು ಹೆಚ್ಚಿಸಲು ಅವರು ಪಟ್ಟ ಶ್ರಮ ಮತ್ತು ಅವರ ಆದರ್ಶಪ್ರಾಯ ಜೀವನವನ್ನು ಚನ್ನವೀರಯ್ಯಸ್ವಾಮಿ ಹಿರೇಮಠ ಅವರು ಸಂಧರ್ಭದಲ್ಲಿ ಸ್ಮರಿಸಿದರು. ಜಗಧೀಶಪ್ಪ ಅವರ ಭೋದನಾ ಶೈಲಿ,ಶಿಸ್ತು ಮತ್ತು ವಿದ್ಯಾರ್ಥಿಗಳ ಮೇಲಿನ ಪ್ರೀತಿ ಅನೇಕರಿಗೆ ಸ್ಪೂರ್ತಿಯಾಗಿತ್ತು ಎಂದು ಅವರು ಚನ್ನವೀರಯ್ಯಸ್ವಾಮಿ ಹಿರೇಮಠರವರು ಬಣ್ಣಿಸಿದರು.

ಸಂದರ್ಭದಲ್ಲಿ ಸೂಗೂರೇಶ್ವರ ಎಸ್ ಗುಡಿ ,ಮಹಾಂತೇಶಸ್ವಾಮಿ ಹಿರೇಮಠ,ಮಲ್ಲಯ್ಯನಾಯಕ ಅಡಕಲಗುಡ್ಡ ಉಪಸ್ಥಿತರಿದ್ದರು.

# ವಯೋ ನಿವೃತ್ತಿ ಹೊಂದಿದ ಸರಕಾರಿ ನೌಕರರಿಗೆ ಸನ್ಮಾನ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘ.ನಿ. ಕಚೇರಿಯ ಸಭಾಂಗಣದಲ್ಲಿ ನಡೆದ 2026–27 ನೇ ಸಾಲಿನಲ್ಲಿ ವಯೋ ನಿವೃತ್ತಿ ಹೊಂದಿದ ಸರಕಾರಿ ನೌಕರರ ಸನ್ಮಾನ ಸಮಾರಂಭ ಕಾರ್ಯಕ್ರಮವನ್ನು ಸಹಕಾರಿಯ ಅಧ್ಯಕ್ಷರಾದ ಡಾ.ಶಂಕರಗೌಡ .ಎಸ್.ಪಾಟೀಲ್ ಉದ್ಘಾಟಿಸಿ ಮಾತನಾಡಿ ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘದ ಯಶಸ್ಸಿನಲ್ಲಿ ಸರಕಾರಿ ನೌಕರರ ಬಹುದೊಡ್ಡ ಕೊಡುಗೆ ಇದೆ ಸರಕಾರಿ ಸೇವೆಯಿಂದ ನಿವೃತ್ತರಾದರು ಕೂಡ ನಿವೃತ್ತ ನೌಕರರು ನಮ್ಮ ಸಹಕಾರಿಯ ಅಭಿವೃದ್ಧಿಯಲ್ಲಿ ಭಾಗಿಗಳಾಗಬೇಕು ಸರಕಾರದ ವಿವಿಧ ಹುದ್ದೆಗಳಲ್ಲಿದ್ದು ಅನೇಕ ವರ್ಷಗಳಕಾಲ ಸಾರ್ವಜನಿಕರ ಸೇವೆಯಲ್ಲಿ ತಮ್ಮ ಬಹುಪಾಲು ಜೀವನವನ್ನು ಕಳೆದ ಸರಕಾರಿ ನೌಕರರನ್ನು ಗೌರವಿಸುವುದು ನಮ್ಮೆಲ್ಲರ ಬಹುದೊಡ್ಡ ಜವಾಬ್ದಾರಿಯಾಗಿದು ನಮ್ಮ ಸಹಕಾರಿ ವತಿಯಿಂದ ಪ್ರತಿ ವರ್ಷ ಮಾನ್ವಿ ಮತ್ತು ಸಿರವಾರ ತಾಲೂಕುಗಳಲ್ಲಿ ಸರಕಾರಿ ಸೇವೆಯಲ್ಲಿದು ನಿವೃತ್ತರಾದ ನೌಕರರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾನ್ವಿ ತಾಲೂಕಿನ 34 ಮತ್ತು ಸಿರವಾರ ತಾಲೂಕಿನ 5 ಜನ ಸರಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿ ವಯೋ ನಿವೃತ್ತಿ ಹೊಂದಿದ ಸರಕಾರಿ ನಿವೃತ್ತ ನೌಕರರನ್ನು ಸನ್ಮಾನಿಸಿ ಗೌರವಿಸಲಾಯಿತು. ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘ.ನಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವೀರೇಶ್ ಎನ್ ಹೋಸೂರು, ಸಹಕಾರಿಯ ವ್ಯವಸ್ಥಾಪಕರಾದ ಚಂದ್ರಮೌಳೇಶ್ವರ ಬೆಟ್ಟದೂರು, ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ, ತಾಲೂಕು ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ರೇವಣಸಿದಯ್ಯಸ್ವಾಮಿ ಹಿರೇಮಠ, ಸಹಕಾರಿಯ ಕಾನೂನು ಸಲಹೆಗಾರರಾದ ವೀರನಗೌಡ ವಕೀಲರು ಪೋತ್ನಾಳ್ ಸೇರಿದಂತೆ ಸಹಕಾರಿಯ ನಿರ್ದೇಶಕರು ಹಾಗೂ ಸಿಬ್ಬಂದಿಗಳು,ನಿವೃತ್ತ ನೌಕರರು ಭಾಗವಹಿಸಿದರು.

## ಬೀದರದಲ್ಲಿ ಅಕ್ರಮ ಆಯುಧ ಮಾರಾಟಕ್ಕೆ ಯತ್ನ: ಇಬ್ಬರ ಬಂಧನ, 6.73 ಲಕ್ಷ ಮೌಲ್ಯದ ಶಸ್ತ್ರಾಸ್ತ್ರ ವಶ: ಎಸ್.ಪಿ ಪ್ರದೀಪ ಗುಂಟಿ




**ಬೀದರ್, ಜು.16:** ಅಕ್ರಮವಾಗಿ ದೇಶೀ ಪಿಸ್ತೂಲ್ ಹಾಗೂ ಮಾರಕಾಸ್ತ್ರಗಳನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಬೀದರ ನಗರ ಪೊಲೀಸರು ಬಂಧಿಸಿದ್ದು, ಅವರಿಂದ 6.73 ಲಕ್ಷ ಮೌಲ್ಯದ ಐದು ದೇಶೀ ಪಿಸ್ತೂಲ್‌ಗಳು, 26 ಜೀವಂತ ಮದ್ದುಗುಂಡುಗಳು, 10 ಖಾಲಿ ಕೇಸ್‌ಗಳು, ಐದು ತಲವಾರಗಳು ಹಾಗೂ ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ಜಪ್ತಿ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ತಿಳಿಸಿದರು.

ನಗರದ ಮಂಗಲಪೇಟೆ ಬಡಾವಣೆಯಲ್ಲಿರುವ ಜಿಲ್ಲಾ ಪೊ?ಲಿಸ್ ವರಿಷ್ಟಾಧಿಕಾರಿಗಳ ಕಚೇರಿ ಅವರಣದಲ್ಲಿ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು,

ನಿನ್ನೆ ಸಂಜೆ ನಗರದ ಹೊರ ವಲಯದಲ್ಲಿರುವ ಜ್ಞಾನಸುಧಾ ಶಾಲೆ ಸಮೀಪದ ರಿಂಗ್‌ರೋಡ್ ಬಳಿ ಇಬ್ಬರು ವ್ಯಕ್ತಿಗಳು ಪಿಸ್ತೂಲ್ ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ದೊರೆತ ಹಿನ್ನೆಲೆಯಲ್ಲಿ, ತನ್ನ ಮಾರ್ಗದರ್ಶನದಲ್ಲಿ ವಿಶೇಷ ತಂಡ ದಾಳಿ ನಡೆಸಿತು. ಸ್ಥಳದಲ್ಲಿದ್ದ ಇಬ್ಬರನ್ನು ವಶಕ್ಕೆ ಪಡೆದು ಪರಿಶೀಲಿಸಿದಾಗ, ಅವರ ಬಳಿ ಇದ್ದ ಮೂರು ಬ್ಯಾಗ್‌ಗಳಲ್ಲಿ ಐದು ದೇಶೀ ಪಿಸ್ತೂಲ್, 26 ಜೀವಂತ ಮದ್ದುಗುಂಡುಗಳು, 10 ಖಾಲಿ ಮದ್ದುಗುಂಡಿನ ಕೇಸ್‌ಗಳು ಹಾಗೂ ಐದು ತಲವಾರಗಳು ಪತ್ತೆಯಾದವು.

ಪ್ರಾಥಮಿಕ ವಿಚಾರಣೆಯಲ್ಲಿ ಆರೋಪಿಗಳು ಈ ಶಸ್ತ್ರಾಸ್ತ್ರಗಳನ್ನು ಮಹಾರಾಷ್ಟ್ರದ ನಾಂದೇಡ್‌ನಲ್ಲಿ ಖರೀದಿಸಿ, ಹೆಚ್ಚಿನ ಬೆಲೆಗೆ ಬೀದರದಲ್ಲಿ ಮಾರಾಟ ಮಾಡಲು ತಂದಿರುವುದಾಗಿ ತಿಳಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಪಿಸ್ತೂಲ್‌ಗಳನ್ನು ಪರೀಕ್ಷಿಸುವ ಉದ್ದೇಶದಿಂದ 10 ಸುತ್ತು ಗುಂಡುಗಳನ್ನು ಹಾರಿಸಿರುವುದಾಗಿಯೂ ವಿಚಾರಣೆಯಲ್ಲಿ ಬೆಳಕಿಗೆ ಬಂದಿದೆ ಎಂದರು.

ಈ ಸಂಬಂಧ ಒಟ್ಟು ನಾಲ್ವರು ಆರೋಪಿಗಳ ವಿರುದ್ಧ ಆಯುಧ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದ್ದು, ಬಂಧಿತ ಇಬ್ಬರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಉಳಿದ ಆರೋಪಿಗಳ ಪತ್ತೆ ಹಾಗೂ ಪ್ರಕರಣದ ತನಿಖೆ ಮುಂದುವರಿದಿದೆ.

ಕಾರ್ಯಾಚರಣೆಯಲ್ಲಿ ಪಾಲ್ಗೊಂಡ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಪ್ರದೀಪ್ ಗುಂಟಿ ಪ್ರಶಂಸಿಸಿದರು.

ಸಾರ್ವಜನಿಕರು ಯಾವುದೇ ಅಕ್ರಮ ಆಯುಧ, ಮದ್ದುಗುಂಡು ಅಥವಾ ಮಾದಕ ವಸ್ತುಗಳ ಖರೀದಿ, ಮಾರಾಟ ಹಾಗೂ ಸಾಗಣೆಯಲ್ಲಿ ತೊಡಗಿಕೊಳ್ಳಬಾರದು ಎಂದು ಜಿಲ್ಲಾ ಪೊಲೀಸ್ ಇಲಾಖೆ ಮನವಿ ಮಾಡುತ್ತದೆ ಎಂದು ಎಸ್.ಪಿ ಹೇಳಿದರು.

ಹೆಚ್ಚುವರಿ ಎಸ್.ಪಿ ಚಂದ್ರಕಾಂತ ಪೂಜಾರಿ, ಅಪರಾಧ ವಿಭಾಗದ ಡಿ.ಎಸ್.ಪಿ ಎನ್.ಡಿ ಸನ್ನದಿ, ಡಿ.ವಾಯ್.ಎಸ್.ಪಿ ದೂದಪೀರ ಮುಲ್ಲಾ, ಡಿ.ಆರ್ ಡಿ.ಎಸ್.ಪಿ ಶರಣಪ್ಪ, ಮಾರ್ಕೆಟ್ ಠಾಣೆ ಸಿಪಿಐ ಫಾಲಕ್ಷಯ್ಯ, ಪಿ.ಎಸ್.ಐ ಸಯ್ಯದ್ ತಸ್ಲಿಮ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಆಹಾರ ವಿತರಣೆಯಲ್ಲಿ ಅವ್ಯವಸ್ಥೆ ಕಂಡರೆ ಅಧಿಕಾರಿಗಳ ವಿರುದ್ಧನಿರ್ದಾಕ್ಷಿಣ್ಯ ಕ್ರಮ : ಡಾ.ಎಚ್.ಕೃಷ್ಣ



**ಬೀದರ್, ಜು 16, :** ಜಿಲ್ಲೆಯಲ್ಲಿ ಮಕ್ಕಳಿಗೆ, ಮಹಿಳೆಯರಿಗೆ ದುರ್ಬಲರಿಗೆ ಹಿರಿಯರಿಗೆ ಆಹಾರ ವಿತರಣೆಯಲ್ಲಿ ಯಾವುದೇ ರೀತಿಯ ಅವ್ಯವಸ್ಥೆ ಕಂಡು ಬಂದಲ್ಲಿ ಆಯಾ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುಲಾಗುವುದೆಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ ಇಂದಿಲ್ಲಿ ತಿಳಿಸಿದರು.

ಬೀದರ ಜಿಲ್ಲೆಯಲ್ಲಿ 3 ದಿನಗಳ ಕಾಲ ಅನಿರೀಕ್ಷಿತ ಪ್ರವಾಸ ಕೈಗೊಂಡಿರುವ ಅವರು ಜುಲೈ 15 ರಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಇಂದು ಜುಲೈ 16 ರಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಆಯೋಗವು ನಾಲ್ಕು ಜನ ಸದಸ್ಯರ ತಂಡದೊಂದಿಗೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಹಮ್ಮಿಕೊಂಡಿದೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರ ಅನ್ವಯ ಆಹಾರ ಪ್ರತಿಯೊಬ್ಬ ಬಡವರಿಗೆ ನಿರ್ಗತಿಕರಿಗೆ ಸರಕಾರವು ದುರ್ಬಲರಿಗೆ, ಮಕ್ಕಳಿಗೆ ಮಹಿಳೆಯರಿಗೆ ಆಹಾರ ಒದಗಿಸುವುದು ಮೂಲಭೂತ ಕರ್ತವ್ಯ, ಪ್ರತಿಯೊಬ್ಬರಿಗೂ ಆಹಾರದ ಹಕ್ಕು ಇದೆ ಎಂಸರು.

ಜಿಲ್ಲೆಯ ವಿವಿಧ ತಾಲೂಕುಗಳ ನ್ಯಾಯಬೆಲೆ ಅಂಗಡಿ, ಆಹಾರಧಾನ್ಯ ಸಗಟು ಮಳಿಗೆ, ಅಂಗನವಾಡಿ ಕೇಂದ್ರಗಳು, ಎಂ.ಎಸ್.ಪಿ.ಟಿ.ಸಿ ಶಾಲೆಗಳಲ್ಲಿ ಮಧ್ಯಾಹ್ನದ ಊಟ, ಆಸ್ಪತ್ರೆಗಳಲ್ಲಿ ಎಸ್.ಆರ್.ಸಿ ಘಟಕ, ವಿವಿಧ ಇಲಾಖೆಗಳ ಹಾಸ್ಟೆಲ್‌ಗಳಲ್ಲಿ ಆಹಾರ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಡಾ.ಕೃಷ್ಣ ಹೇಳಿದರು.

ಆಹಾರ ಸಂಬಂಧ ಎಲ್ಲ ಯೋಜನೆಗಳು ಸರಿಯಾಗಿ ಅನುಷ್ಠಾನ ಆಗುತ್ತಿವೆಯೆ ಎಂಬುದನ್ನು ಪರಿಶೀಲಿಸಲು ಈ ಅನಿರೀಕ್ಷಿತ ಪ್ರವಾಸ ಹಮ್ಮಿಕೊಳ್ಳಲಾಗಿದೆ. ತಾವು ಜುಲೈ 17ರ ವರೆಗೆ ಜಿಲ್ಲೆಯಲ್ಲಿದ್ದು, ಸಾರ್ವಜನಿಕರು ಆಹಾರ ಸಂಬಂಧಿತ ಯಾವುದಾದುರು ಆಹಾವಾಲುಗಳು ಇದ್ದಲ್ಲಿ ಸಾರ್ವಜನಿಕರು ನೇರವಾಗಿ ಮೊಬೈಲ್ ನಂಬರ 9448466099 ಹಾಗೂ 9945037681ಗೆ ಸಂಪರ್ಕಿಸಬಹುದಾಗಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 150 ಪೆಟ್ರೋಲ್ ಬಂಕ್‌ಗಳಿವೆ ಎಲ್ಲ ಕಡೆ ನೀರು, ಗಾಳಿ ಹಾಗೂ ಶೌಚಾಲಯ ಕಡ್ಡಾಯವಾಗಿ ಉಚಿತವಾಗಿ ಲಭ್ಯವಾಗಬೇಕು ಎಂದರು. ಅಳತೆ ಮಾಪನ ಇಲಾಖೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕೆಂದು ಹೇಳಿದರು.

ಒಟ್ಟು 14 ಇಲಾಖೆಗಳು ಆಯೋಗದ ವ್ಯಾಪ್ತಿಗೆ ಒಳಪಡುತ್ತವೆ. ಗೋದಾಮುಗಳಿಂದ ಅಕ್ಕಿ ಕಳ್ಳ ಸಾಗಾಟಣೆ ನ್ಯಾಯಬೆಲೆ ಅಂಗಡಿಗಳಲ್ಲಿ ಅಸಮರ್ಪಕ ಆಹಾರ ವಿತರಣೆ, ಅಂಗನವಾಡಿ ಅಥವಾ ಹಾಸ್ಟೇಲ್ ಗಳಲ್ಲಿ ಅಸಮರ್ಪಕ ಆಹಾರ ವಿತರಣೆಯಂತಹ ದೂರುಗಳು ಇದ್ದಲ್ಲಿ ಸಾರ್ವಜನಿಕರು ನಮ್ಮ ಮೊಬೈಲ್‌ಗೆ ಕರೆ ಮಾಡಬಹುದು. ಗೌಪ್ಯವಾಗಿ ಅಹವಾಲು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

ಆಯೋಗದ ಸದಸ್ಯರಾದ ಮಾರುತಿ ದೊಡ್ಡಲಿಂಗಣ್ಣವರ ಲಿಂಗರಾಜ ಕೋಟೆ, ಸುಮಂತ ರಾವ್, ಕೆ.ಎಸ್.ವಿಜಯಲಕ್ಷ್ಮೀ ವೇದಿಕೆಯಲ್ಲಿದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**
**6360866626**

## ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 16:**ರಾಯಚೂರಿನ ಯರಮರಸ್ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ವಿವಿಧ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಸತಿ ಶಾಲೆಯಲ್ಲಿ ಭೌತಶಾಸ್ತ್ರ ವಿಷಯದಲ್ಲಿ 01ಹುದ್ದೆಗೆ ಎಮ್.ಎಸ್ಸಿ.ಬಿಇಡಿ ಹಾಗೂ ವಿಜ್ಞಾನ ವಿಷಯದಲ್ಲಿ 01ಹುದ್ದೆಗೆ ಬಿ.ಎಸ್ಸಿ.ಬಿಇಡಿ ವಿದ್ಯಾರ್ಹತೆ ಹೊಂದಿರುವವರು ಅಗತ್ಯ ದಾಖಲಾತಿಗಳೊಂದಿಗೆ ಜುಲೈ 25ರೊಳಗಾಗಿ ಯರಮರಸ್ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 79759443982 ಅಥವಾ 9035888432ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 12ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಜುಲೈ 16:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಗಿಲ್ಲೇಸೂಗೂರು ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜುಲೈ 12ರ ಬೆಳಗ್ಗೆ 08ಗಂಟೆಯಿಂದ ಸಾಯಂಕಾಲ 05ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 4ನೇ ವಾರದಲ್ಲಿ ಉದ್ಯಮಶೀಲತಾ ತಿಳುವಳಿಕೆ ತರಬೇತಿ

**ರಾಯಚೂರು ಜುಲೈ 16:** ರಾಜ್ಯ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸಿದ ಎಲ್ಲಾ ವರ್ಗದ ಪುರುಷರಿಗೂ ಮತ್ತು ಮಹಿಳೆಯರುಗಳಿಗೆ 1 ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ ಕಾರ್ಯಕ್ರಮವನ್ನು ರಾಯಚೂರಿನಲ್ಲಿ 2026ರ ಜುಲೈ 4ನೇ ವಾರದಲ್ಲಿ ಹಮ್ಮಿಕೊಳ್ಳಲಾಗುವುದು.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು, ಇದಕ್ಕಾಗಿ ರಾಯಚೂರು ಜಿಲ್ಲೆಯ ಆಸಕ್ತ ಎಲ್ಲಾ ವರ್ಗದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 18 ವರ್ಷ ದಿಂದ 40 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಕನಿಷ್ಠ 8 ನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ಜುಲೈ 20ರೊಳಗಾಗಿ ಮೊಬೈಲ್ ಸಂಖ್ಯೆ 9986600631ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಸ್ತೇಶಿಯಾ ತಜ್ಞನ ಭೀಕರ ಕೊಲೆ :ಪತ್ನಿ ವಶಕ್ಕೆ

**ಧಾರವಾಡ,ಜು.16:** ಚಿರಾಯು ಆಸ್ಪತ್ರೆಯ ಅರವಳಿಕೆ ತಜ್ಞ ಕಿರಣ್ ಹೊನ್ನಣ್ಣನವರ್‌ನನ್ನು ಚಾಕುವಿನಿಂದ ಇರಿದು ಕೊಲೆ ಮಾಡಿರುವ ಘಟನೆ ಕರ್ನಾಟಕ ವಿಶ್ವವಿದ್ಯಾಲಯ ರಸ್ತೆಯ ರನ್ನಾಕ್ಸೆಲ್ಲೋ ಅಪಾರ್ಟ್‌ಮೆಂಟ್‌ನಲ್ಲಿ ನಡೆದಿದೆ. ಅವರ 10 ವರ್ಷದ ಮಗ ನಿಹಿಲ್ ನ ಮೇಲೂ ಹಲ್ಲೆ ನಡೆಸಲಾಗಿದ್ದು, ಆತನನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಅಪಾರ್ಟ್‌ಮೆಂಟ್‌ಗೆ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಭೇಟಿ ನೀಡಿದ್ದು, ಘಟನೆ ಸಂಬಂಧ ಡಾ.ಕಿರಣ್ ಪತ್ನಿ ಡಾ.ಪ್ರಿಯಾರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.



ಸದ್ಯ ಡಾ.ಕಿರಣ್ ಅವರನ್ನು ಪತ್ನಿ ಪ್ರಿಯಾಂಕಾಳೇ ಹತ್ಯೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು,ಪತಿ ಕೊಂದ ಬಳಿಕ ಮಗನ ಮೇಲೂ ಹಲ್ಲೆ ನಡೆದಿದೆ. ಬಳಿಕ ಡಾ.ಪ್ರಿಯಾಂಕಾ ತಾನೂ ಆತ್ಮಹತ್ಯೆಗೆ ಯತ್ನಿಸಿರುವ ಬಗ್ಗೆ ಅನುಮಾನಗಳ ವ್ಯಕ್ತವಾಗಿವೆ.

ಇನ್ನು ತಾನೇ ಕೊಲೆ ಮಾಡಿರುವುದಾಗಿ ಪ್ರಿಯಾಂಕಾ ಒಪ್ಪಿಕೊಂಡಿದ್ದಾರೆ ಎನ್ನಲಾಗಿದ್ದು, ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಆರೋಪಿಗೆ ಚಿಕಿತ್ಸೆ ನೀಡಲಾಗ್ತಿದೆ. ಕೊಲೆ ಬಳಿಕ ಆಕೆ ತಾನೂ ಇನ್ಸುಲಿನ್ ಚುಚ್ಚಿಕೊಂಡಿದ್ದ ಕಾರಣ ಲೋ ಶುಗರ್‌ಗೆ ಚಿಕಿತ್ಸೆ ನೀಡಲಾಗುತ್ತಿದೆ.ಇದೀಗ ಪ್ರಿಯಾಂಕಾ ಆರೋಗ್ಯ ಸ್ಥಿರವಾಗಿದ್ದು, ಶುಗರ್ ಏರುಪೇರು ಬಿಟ್ಟರೆ ಬೇರೆ ಸಮಸ್ಯೆ ಇಲ್ಲ. ಮಾನಸಿಕ ಅಥವಾ ಇತರ ಯಾವುದೇ ಕಾಯಿಲೆ ಬಗ್ಗೆ ಮಾಹಿತಿ ಲಭ್ಯವಿಲ್ಲ ಎಂದು ಕಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಈಶ್ವರ್ ಹಸಬಿ ಮಾಹಿತಿ ನೀಡಿದ್ದಾರೆ.

ಇನ್ನು ಘಟನೆ ಬಗ್ಗೆ ಪ್ರತಿಕ್ರಿಯಿಸಿರುವ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್, ಸಂಬಂಧಿಕರು ಫೋನ್ ಮಾಡಿದಾಗ ಪತಿ ರೆಸ್ಟ್ ಮಾಡುತ್ತಿದ್ದಾರೆ ಎಂದು ಪತ್ನಿ ಪ್ರಿಯಾ ಹೇಳಿದ್ದಾರೆ. ಡಾ.ಕಿರಣ್ ಚಿರಾಯು ಆಸ್ಪತ್ತೆಯಲ್ಲಿ ಅನಸ್ತೇಶಿಯಾ ತಜ್ಞರಾಗಿದ್ದರೆ, ಪತ್ನಿ ನೇತ್ರ ವೈದ್ಯೆಯಾಗಿದ್ದರು. ಸಂಜೆಯವರೆಗೂ ಫೋನ್ ಸ್ವೀಕರಿಸದೇ ಇದ್ದಾಗ ಅನುಮಾನದಿಂದ ಸಂಬಂಧಿಕರು ಮನೆಗೆ ಬಂದು ನೋಡಿದಾಗ, ರಕ್ತದ ಮಡುವಿನಲ್ಲಿ ಅವರು ಬಿದ್ದಿರೋದು ಕಂಡಿದೆ.ಗಾಯಗೊಂಡಿರುವ ಬಾಲಕನಿಗೆ ಜೀವ ಇದ್ದ ಕಾರಣ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಾರ್ಟ್‌ಮೆಂಟ್‌ಗೆ ಭದ್ರತೆ ಇರುವ ಕಾರಣ ಇಲ್ಲಿ ಬೇರೆಯವರು ಬಂದು ಕೊಲೆ ಮಾಡೋದು ಸಾಧ್ಯವಿಲ್ಲ. ಘಟನೆಗೆ ಸರಿಯಾದ ಕಾರಣ ಕೂಡ ಇನ್ನೂ ಗೊತ್ತಾಗಿಲ್ಲ. ಪ್ರಿಯಾಂಕಾ ಆಘಾತದಲ್ಲಿ ಏನೇನೋ ಹೇಳುತ್ತಿದ್ದು, ಅಸಲಿಗೆ ಏನಾಗಿದೆ ಎಂಬ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದೇವೆ ಎಂದವರು ತಿಳಿಸಿದ್ದಾರೆ.

ಇದೇ ವೇಳೆ ಡಾ.ಕಿರಣ್ ಹೊನ್ನಣ್ಣನವರ್ ಮತ್ತು ಪ್ರಿಯಾಂಕಾ ಪ್ರೀತಿಸಿ ಮದುವೆಯಾಗಿದ್ದರು. ತಮ್ಮ ಮೊದಲ ಪತ್ನಿ ಮತ್ತು ಪತಿಯಿಂದ ವಿಚ್ಛೇದನ ಪಡೆದಿದ್ದ ಇವರಿಗೆ ಮ್ಯಾಟ್ರಿಮೋನಿ ಮೂಲಕ ಪರಿಚಯ ಆಗಿತ್ತು. ಬಳಿಕ ಇಬ್ಬರೂ ಎರಡನೇ ವಿವಾಹ ಆಗಿದ್ದರು. ಆದರೆ ಪತಿ ಮೇಲೆ ಪ್ರಿಯಾಂಕಾ ನಿರಂತರವಾಗಿ ಅನುಮಾನಪಡುತ್ತಿದ್ದ ಕಾರಣ, ದಂಪತಿ ನಡುವೆ ಆಗಾಗ ಜಗಳ ಆಗುತ್ತಿತ್ತು.ಈ ನಡುವೆ ಕಿರಣ್ ಹೊನ್ನಣ್ಣನವರ್ ಅವರನ್ನು ನಿನ್ನೆ ಬೆಳಗ್ಗೆ ಚಾಕುವಿನಿಂದ ಇರಿದು ಪ್ರಿಯಾಂಕಾ ಕೊಲೆ ಮಾಡಿದ್ದಾರೆ. ಬಳಿಕ ಬಳಿಕ ಪುತ್ರ ನಿಹಿಲ್‌ಗೆ 2 ಕಡೆ ಚಾಕುವಿನಿಂದ ಇರಿದಿದ್ದಾರೆ. ಮನೆಗೆ ಹೋದಾಗ ಬಾಲಕ ಉಸಿರಾಡುವುದನ್ನು ಗಮನಿಸಿದ್ದ ಪೊಲೀಸರು, ಆತನನ್ನು ಆಸ್ಪತ್ರೆಗೆ ದಾಖಲಿಸಿದ್ದು, ಸದ್ಯ ಖಾಸಗಿ ಆಸ್ಪತ್ರೆಯಲ್ಲಿ ಬಾಲಕ ನಿಹಿಲ್‌ಗೆ ಚಿಕಿತ್ಸೆ ಮುಂದುವರಿದಿದೆ.

## ಕೆಬಿಎನ್ ವಿವಿ : ಓರಿಯಂಟೇಶನ್ ಕಾರ್ಯಕ್ರಮ ಯಶಸ್ವಿ



**ಕಲಬುರಗಿ:** ನಗರದ ಕೆಬಿಎನ್ ವಿಶ್ವವಿದ್ಯಾಲಯದ ಶಿಕ್ಷಣ ನಿಕಾಯದಲ್ಲಿ ಬಿ ಎಡ ವಿದ್ಯಾರ್ಥಿಗಳಿಗೆ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು.

ಈ ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಡಾ ನಿಶಾತ ಆರಿಫ್ ಹುಸ್ಸೇನಿ, ಡೀನ ಭಾಷಾ ನಿಕಾಯ ಇವರು ಖಾಜಾ ಶಿಕ್ಷಣ ಸಂಸ್ಥೆಯ ಶೈಕ್ಷಣಿಕ ಸೇವೆಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ವಿದ್ಯಾರ್ಥಿಗಳಿಗೆ ಕಠಿಣ ಶ್ರಮದ ಮತ್ತು ಸಮಯದ ಮಹತ್ವದಿಂದ ಗುರಿ ಮತ್ತು ಭವಿಷ್ಯವನ್ನು ನಿರ್ಮಿಸಿಕೊಳ್ಳುವ ಬಗ್ಗೆ ಸವಿಸ್ತಾರವಾಗಿ ಉಪನ್ಯಾಸ ನೀಡಿದರು.

ಇನ್ನೋರ್ವ ಅತಿಥಿಯಾಗಿ ಆಗಿಸಿದ್ದ ಡಾ. ಶ್ರೀನಿವಾಸ, ಡೀನ್ ವಾಣಿಜ್ಯ ನಿಕಾಂಯ್ ಇವರು ವಿದ್ಯಾರ್ಥಿಗಳಿಗೆ ಸ್ಪಷ್ಟ ಗುರಿಯೊಂದಿಗೆ ಅಧ್ಯಯನ ಮಾಡುವಂತೆ ಕಿವಿ ಮಾತು ಹೇಳಿದರು. ಡಾ. ಇಕ್ಬಲ್ ಮಟ್ಟು, ಡೀನ ಶಿಕ್ಷಣ ನಿಕಾಯ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿದ್ಯಾರ್ಥಿನಿಯರದ ಅಜರಾ ಅಂಜು ಹಾಗೂ ಸನಾ ಅಂರೀನ ಪ್ರಾರ್ಥಿಸಿದರೆ, ಸಯ್ಯದಾ ಆಯೇಷಾ ಮುಸ್ಕಾನ ಸ್ವಾಗತಿಸಿದರು. ಸಯ್ಯದಾ ಆಯೇಷಾ ರೂಹಿ ಮತ್ತು ಮುಸ್ಕಾನ ನಿರೂಪಿಸಿದರು. ಡಾ ಸಾಲಿಹಾ ಖಾತುನ ಮತ್ತು ಡಾ ಕುದ್ರತ್ ಉಣ್ಣಿಸಾ ಶೇಕ ವಂದಿಸುದರು.

ಕ್ಯಾಲೀಕತ ವಿಶ್ವ ವಿದ್ಯಾಲಯದ ಡಾ. ಅಬ್ದುಲ್ ಗಫುರ ಹಾಗೂ ರಿಷಿಹುಡ್ ವಿಶ್ವ ವಿದ್ಯಾಲಯದ ಪ್ರೊ ರೆವಾ ಪರಿಮೋ ಸಂಪಂನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದರು. ಉಪನ್ಯಾಸಕರಾದ ಡಾ ವಡ್ಡನಕೇರಿ, ರಿಯಾಜ ಪಠಾಣ, ಮೆಹಂಬುಬ ಸಿ, ಫಾತಿಮಾ ಬೇಗಂ, ರಝಿಯಾ ಪರ್ವೀನ್ ಸೇರಿದಂತೆ ನಿಕಾಯದ ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು.

## ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ರೂ.4 ಕೋಟಿ ಮಂಜೂರು



**ಬೀದರ್:ಜು.16:** ಬೀದರ್ ಜಿಲ್ಲಾ ಕೇಂದ್ರದಲ್ಲಿ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ರಾಜ್ಯ ಸರ್ಕಾರ ರೂ.4 ಕೋಟಿ ಅನುದಾನ ಮಂಜೂರು ಮಾಡಿರುವ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಅವರನ್ನು ಜಿಲ್ಲಾ ವಾಲ್ಮೀಕಿ ಸಮಾಜ ಸಂಘದ ಪದಾಧಿಕಾರಿಗಳು ಬೆಂಗಳೂರಿನಲ್ಲಿ ಭೇಟಿ ಮಾಡಿ ಸನ್ಮಾನಿಸಿ ಅಭಿನಂದಿಸಿದರು.

ಜಿಲ್ಲಾ ಕೇಂದ್ರದಲ್ಲಿ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಮಾಡಬೇಕೆಂಬುದು ಸಮಾಜದ ಬಹುದಿನಗಳ ಬೇಡಿಕೆಯಾಗಿತ್ತು. ಹಲವು ಬಾರಿ ಸರ್ಕಾರ ಹಾಗೂ ಸಂಬಂಧಿತ ಸಚಿವರಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳಲಾಗಿರಲಿಲ್ಲ ಎಂದು ತಿಳಿಸಿದ್ದಾರೆ.

2018ರಲ್ಲಿ ಜಿಲ್ಲಾಡಳಿತವು ಬೀದರ್ ನಗರದ ಚಿಕ್ಕಪೇಟೆ ಸರ್ವೆ ನಂ. 61ರಲ್ಲಿ ಅರ್ಧ ಎಕರೆ ಜಾಗವನ್ನು ಸಮುದಾಯ ಭವನ ನಿರ್ಮಾಣಕ್ಕಾಗಿ ಮಂಜೂರು ಮಾಡಿತ್ತು. ಮಾಜಿ ಸಚಿವ ಬಂಡೆಪ್ಪ ಖಾಸೇಂಪುರ್ ಅವರು ಭೂಮಿಪೂಜೆ ನೆರವೇರಿಸಿದ್ದರೂ ಕಾಮಗಾರಿ ಆರಂಭವಾಗಿರಲಿಲ್ಲ ಎಂದು ಅವರು ಹೇಳಿದ್ದಾರೆ.

ಬಳಿಕ ಈ ವಿಷಯವನ್ನು ಅಂದಿನ ಅರಣ್ಯ ಮತ್ತು ಪರಿಸರ ಸಚಿವರಾಗಿದ್ದ ಈಶ್ವರ ಬಿ. ಖಂಡ್ರೆ ಅವರ ಗಮನಕ್ಕೆ ತಂದಾಗ, ಅವರು ಅಂದಿನ ಮುಖ್ಯಮಂತ್ರಿ ಹಾಗೂ ಪರಿಶಿಷ್ಟ ಪಂಗಡಗಳ ಇಲಾಖೆಯ ಹೆಚ್ಚುವರಿ ಹೊಣೆ ಹೊತ್ತಿದ್ದ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಅನುದಾನ ಮಂಜೂರು ಮಾಡುವಂತೆ ಮನವಿ ಮಾಡಿದ್ದರು. ಇದಕ್ಕೆ ಸ್ಪಂದಿಸಿದ ಸರ್ಕಾರ ಬೀದರ್ ಜಿಲ್ಲಾ ಕೇಂದ್ರದಲ್ಲಿ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ರೂ.4 ಕೋಟಿ ಅನುದಾನ ಮಂಜೂರು ಮಾಡಿ ಆದೇಶ ಹೊರಡಿಸಿದ್ದು ಅದರಲ್ಲಿ ರೂ.1 ಕೋಟಿ ಬಿಡುಗಡೆ ಆಗಿದೆ ಎಂದು ತಿಳಿಸಿದ್ದಾರೆ.

ಅನುದಾನ ಮಂಜೂರಿಗೆ ಸಹಕಾರ ನೀಡಿದ ಸಚಿವ ಈಶ್ವರ ಬಿ. ಖಂಡ್ರೆ ಅವರನ್ನು ಸಮಾಜದ ವತಿಯಿಂದ ಬೆಂಗಳೂರಿನ ಸರ್ಕಾರಿ ಕಚೇರಿಯಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ವಾಲ್ಮೀಕಿ ಸಮಾಜ ಸಂಘದ ಅಧ್ಯಕ್ಷ ಶರಣಪ್ಪ ಖಾಸೇಂಪುರ್, ಸಮಾಜದ ಯುವ ಮುಖಂಡರಾದ ಮಾರುತಿ ಮಾಸ್ಟರ್ ಹಾಗೂ ಸನ್ಮುಖಪ್ಪ ವಾಲೀಕಾರ ಉಪಸ್ಥಿತರಿದ್ದರು.

## ಮತದಾರರ ಪಟ್ಟಿ ಪರಿಷ್ಕರಣೆ: ಬೀದರ ನಗರದ ವಿವಿಧೆಡೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ



**ಬೀದರ ಜು 16 :** ಜಿಲ್ಲೆಯಾದ್ಯಂತ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (SIR) ಕಾರ್ಯವು ಅತ್ಯಂತ ಚುರುಕಿನಿಂದ ಸಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ಶರ್ಮಾ ಅವರು ನಗರದ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬುಧವಾರ ನಗರದ ಗಣೇಶ ನಗರ, ಬಸವ ನಗರ, ಕುಂಬಾರವಾಡ, ಫಯಾಜ್‌ಪೂರ ದರ್ಗಾ ಸೇರಿದಂತೆ ಪ್ರಮುಖ ಬಡಾವಣೆಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಮನೆ ಮನೆಗೆ ಭೇಟಿ ನೀಡಿ ಸಾರ್ವಜನಿಕರಿಗೆ ನೀಡಿರುವ ಮತದಾರರ ಪಟ್ಟಿ ಪರಿಷ್ಕರಣೆ ಎನುಮರೇಷನ್ ಅರ್ಜಿ ನಮೂನೆಗಳನ್ನು ಸೂಕ್ತವಾಗಿ ಭರ್ತಿ ಮಾಡಿ ತಕ್ಷಣವೇ ಬಿಎಲ್‌ಒ (ಃಐಔ) ಗಳಿಗೆ ಸಲ್ಲಿಸಬೇಕು. ಜಿಲ್ಲೆಯಲ್ಲಿ ಯಾವುದೇ ಒಬ್ಬ ಅರ್ಹ ವ್ಯಕ್ತಿಯೂ ಮತದಾರರ ಪಟ್ಟಿಯಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಈ ವಿಶೇಷ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಮನೆ ಮನೆ ಸಮೀಕ್ಷೆ ಕಾರ್ಯದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಬಾರದು, ಸಾರ್ವಜನಿಕರಿಂದ ಬರುವ ಅರ್ಜಿಗಳನ್ನು ನಿಖರವಾಗಿ ಮತ್ತು ಜವಾಬ್ದಾರಿಯುತವಾಗಿ ಪರಿಶೀಲಿಸಿ, ನಿಗದಿತ ಅವಧಿಯೊಳಗೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಸ್ಥಳದಲ್ಲಿದ್ದ ಚುನಾವಣಾ ಅಧಿಕಾರಿಗಳು ಹಾಗೂ ಬಿಎಲ್‌ಒಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಮಹಮ್ಮದ್ ಶಕೀಲ್, ಬೀದರ ತಹಶಿಲ್ದಾರ, ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಜನಪದ ಸಂಸ್ಕೃತಿ ಉಳಿವಿಗೆ ಸಂಘ-ಸಂಸ್ಥೆಗಳ ಪಾತ್ರ ಶ್ಲಾಘನೀಯ

**ಆಳಂದ: ಜು.16:**ಇಂದಿನ ತಾಂತ್ರಿಕ ಯುಗದಲ್ಲಿ ಸಾಹಿತ್ಯ, ಸಂಗೀತ ಹಾಗೂ ಜನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸಂಘ-ಸಂಸ್ಥೆಗಳು ಹಾಗೂ ಸರ್ಕಾರ ಕೈಗೊಳ್ಳುತ್ತಿರುವ ಕಾರ್ಯಗಳು ಶ್ಲಾಘನೀಯವಾಗಿವೆ ಎಂದು ಶಾಂತಯ್ಯ ಹಿರೇಮಠ ಅಭಿಪ್ರಾಯಪಟ್ಟರು.

ತಾಲೂಕಿನ ನೆರೆಯ ಹತಗುಂದಾ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಸ್ಥಾನದ ಆವರಣದಲ್ಲಿ ಬಸವನ ಸಂಗೊಳಗಿ ಶ್ರೀ ಬಸವೇಶ್ವರ ಜಾನಪದ ಕಲಾ ಸಂಘ (ರಿ) ಆಶ್ರಯದಲ್ಲಿ ಆಯೋಜಿಸಿದ್ದ "ನಾದ ನಿರಂಜನ" ಸಾಂಸ್ಕೃತಿಕ ಹಾಗೂ ಸಂಗೀತ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

ಜನಪದ ಕಲೆ, ಭಕ್ತಿಗೀತೆ ಹಾಗೂ ಸುಗಮ ಸಂಗೀತ ನಮ್ಮ ಸಂಸ್ಕೃತಿಯ ಜೀವಾಳವಾಗಿದ್ದು, ಇವುಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ಉಳಿಸುವ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ ಎಂದು ಅವರು ಹೇಳಿದರು. ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಗ್ರಾಮೀಣ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಜೊತೆಗೆ ಸಮಾಜದಲ್ಲಿ ಸೌಹಾರ್ದತೆ ಮತ್ತು ಸಾಂಸ್ಕೃತಿಕ ಜಾಗೃತಿ ಮೂಡಿಸುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಲ್ಲಯ್ಯಸ್ವಾಮಿ ಸುಂಟನೂರ ವಹಿಸಿದ್ದರು. ವೇದಿಕೆಯಲ್ಲಿ ಅರುಣಕುಮಾರ ಓಗೆ, ಪ್ರಭುಲಿಂಗ ಬಿರೆದಾರ, ನಾಗೇಂದ್ರಪ್ಪ ಅಲ್ದಕ್, ವೀರಣ್ಣ ಕಂಬಾರ, ರವಿ ಅಲ್ದಕ್ ಹಾಗೂ ದೇವಿಂದ್ರ ಅಲ್ದಕ್ ಉಪಸ್ಥಿತರಿದ್ದರು.

ಸಂಗೀತ ಕಾರ್ಯಕ್ರಮದಲ್ಲಿ ಸೂರ್ಯಕಾಂತ ಶಾಸ್ತ್ರಿ, ರಾಜೇಂದ್ರ ವಿಶ್ವಕರ್ಮ, ಮಡಿವಾಳಪ್ಪ ನಂದೂರ, ಶರಣಯ್ಯ ಮಠಪತಿ, ಶರಣು ಸಾಗನೂರ, ಅಡವಯ್ಯ ಹಿರೇಮಠ, ಗುರಲಿಂಗಯ್ಯ ಸ್ವಾಮಿ ಹಿತ್ತಲಶಿರೂರ, ರವಿಸ್ವಾಮಿ ಗೋಟೂರ ಹಾಗೂ ಶರಣಪ್ಪ



ಬಿಲಗುಂದಿ ಅವರು ಭಕ್ತಿಗೀತೆ, ಜನಪದ ಗೀತೆ ಹಾಗೂ ಸುಗಮ ಸಂಗೀತವನ್ನು ಪ್ರಸ್ತುತಪಡಿಸಿ ನೆರೆದಿದ್ದ ಸಂಗೀತಾಸಕ್ತರನ್ನು ರಂಜಿಸಿದರು. ಅವರ ಸುಮಧುರ ಗಾಯನಕ್ಕೆ ಪ್ರೇಕ್ಷಕರು ಕರತಾಡನದ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದರು.

ರೇವಣಯ್ಯಸ್ವಾಮಿ ನಿರೂಪಿಸಿದರು. ಸಂಘದ ಅಧ್ಯಕ್ಷ ಗುರುಪಾದಯ್ಯ ಸ್ವಾಮಿ ಸ್ವಾಗತಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಕಲಾಭಿಮಾನಿಗಳು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ್ದ ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

# ಉತ್ತಮ ಸಮಾಜ ಕಟ್ಟಲು ಪುಸ್ತಕ ಓದು ಅಗತ್ಯ : ಪ್ರೊ.ಸಿದ್ರಾಮಪ್ಪಾ ಮಾಸಿಮಾಡೆ



**ಬೀದರ್:ಜು.16:** ಪುಸ್ತಕಗಳ ಓದಿನಿಂದ ಬೌದ್ಧಿಕ ಪ್ರಬುದ್ಧತೆ ಬೆಳೆಯುತ್ತದೆ. ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ಪುಸ್ತಕಗಳು ಸಹಕಾರಿಯಾಗಿವೆ ಎಂದು ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ.ಸಿದ್ರಾಮಪ್ಪಾ ಮಾಸಿಮಾಡೆ ಹೇಳಿದರು. ಪ್ರಚಲಿತಘಟನೆಗಳು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಜಾಗೃತ ಸಮಿತಿ ಬೀದರ್ ಸಹಯೋಗದಲ್ಲಿ ಬೀದರ್‌ನ ಗುಮ್ಮೆ ಬಡಾವಣೆಯ ಸಾಹಿತಿ ಶಿಲ್ಪಾ ಮಹೇಶ ಮಜಗೆ ಅವರ ನಿವಾಸದಲ್ಲಿ ಮಂಗಳವಾರ ಸಂಜೆ ಆಯೋಜಿಸಿದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

"ಪುಸ್ತಕಗಳು ಕಲೆ, ಸಾಹಿತ್ಯ, ಸಂಸ್ಕೃತಿ ಸೇರಿ ಇಡೀ ಜಗತ್ತಿನ ಜ್ಞಾನ ನೀಡುತ್ತವೆ. ಪರಸ್ಪರ ಸಂಬಂಧ ಬೆಳೆಸುತ್ತವೆ. ಉತ್ತಮ ಸಮಾಜ ಕಟ್ಟಲು ಕೃತಿ ಓದುವುದು ಅಗತ್ಯ. ಮನೆಗೊಂದು ಗ್ರಂಥಾಲಯ ಕಾರ್ಯಕ್ರಮ ಎಲ್ಲರಿಗೂ ಪ್ರೇರಣೆಯಾಗಿ ಮನೆ-ಮನೆಗಳಲ್ಲಿ ಪತ್ರಿಕೆ, ಪುಸ್ತಕಗಳನ್ನು ಓದುವವರ ಸಂಖ್ಯೆ ಅಧಿಕವಾಗಬೇಕಿದೆ" ಎಂದರು.

ಹಿರಿಯ ಸಾಹಿತಿ ಭಾರತಿ ವಸ್ತ್ರದ್ ಅವರು ವಿಶೇಷ ಉಪನ್ಯಾಸ ನೀಡಿ, "ಆಧುನಿಕತೆಯ ಭರಾಟೆಯಲ್ಲಿ ನಾವು ಓದಿನ ಅಭಿರುಚಿ ಕಳೆದುಕೊಳ್ಳುತ್ತಿದ್ದೇವೆ. ಮನೆಯಲ್ಲಿ ಪುಸ್ತಕ ಸಂಗ್ರಹಣೆಗೆ ಸ್ಥಳ ಮೀಸಲಿಡಬೇಕೆಂಬ ಆಸಕ್ತಿ ಸಹ ತೋರುತ್ತಿಲ್ಲ. ಆದರೆ, ಪುಸ್ತಕ ಓದಿನಿಂದ ಜಗತ್ತಿನ ಜ್ಞಾನ ಕಲಿಯಲು ಸಾಧ್ಯ. ಮನೆಯಲ್ಲಿ ಪುಸ್ತಕ ಗ್ರಂಥಾಲಯವಿದ್ದರೆ ಸಾಹಿತ್ಯ, ಸಂಸ್ಕೃತಿಯ ವಾತಾವರಣ ನಿರ್ಮಾಣವಾಗುತ್ತದೆ ಎಂಬುದು ತಿಳಿಯಬೇಕಿದೆ. ಓದಿನ ಹವ್ಯಾಸವು ಮನಸ್ಸಿನ ಏಕಾಗ್ರತೆ, ನೆಮ್ಮದಿ, ಜ್ಞಾನ ವೃದ್ಧಿಸುತ್ತದೆ. ಎಲ್ಲೆಡೆ ಮನೆಗೊಂದು ಪುಸ್ತಕಾಲಯ ಆಗಬೇಕು" ಎಂದು ಅಭಿಪ್ರಾಯಪಟ್ಟರು.

ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಬಾಲಾಜಿ ಕುಂಬಾರ ಪ್ರಾಸ್ತಾವಿಕ ಮಾತನಾಡಿ, "ಪುಸ್ತಕಗಳು ನಮ್ಮ ಉತ್ತಮ ಸ್ನೇಹಿತರಿದ್ದಂತೆ. ಎಲ್ಲರ ಮನೆಯಲ್ಲಿ ದೇವರ ಕೋಣೆ ಇರುವಂತೆ ಮನೆಯಲ್ಲಿ ಗ್ರಂಥಾಲಯ ನಿರ್ಮಾಣಕ್ಕೆ ಜಾಗ ಮೀಸಲಿಡಬೇಕು. ಪ್ರತಿಯೊಬ್ಬರು ಓದಿನ ಅಭಿರುಚಿ ಬೆಳೆಸಿಕೊಂಡರೆ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಉಳಿಯುತ್ತವೆ. ಮನೆ-ಮನೆಗಳಲ್ಲಿ ಪುಸ್ತಕ ಓದುವ ಸಂಸ್ಕೃತಿ ಹೆಚ್ಚಿಸುವುದು ಕನ್ನಡ ಪುಸ್ತಕ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಗ್ರಂಥಾಲಯಗಳ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ" ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಾಹಿತಿ ಶಿಲ್ಪಾ ಮಹೇಶ ಮಜಗೆ ಹಾಗೂ ಹಿರಿಯ ಸಾಹಿತಿ ರಘುಶಂಖ ಭಾತಂಬ್ರಾ ಅವರು ಪುಸ್ತಕಗಳ ಮಹತ್ವದ ಕುರಿತು ಮಾತನಾಡಿದರು. ಇದೇ ಸಂದರ್ಭದಲ್ಲಿ ಶಿಲ್ಪಾ ಮಜಗೆ ಅವರ ಮನೆಯಲ್ಲಿ ಸ್ಥಾಪಿಸಿದ 'ಪುಸ್ತಕ ಕುಂಜ' ನೂತನ ಗ್ರಂಥಾಲಯ ಕೋಣೆಯನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿ ಸದಸ್ಯರಾದ ಜಯದೇವಿ ಯದಲಾಪುರೆ, ಲಕ್ಷ್ಮಣ ಮೇತ್ರೆ ಸೇರಿದಂತೆ ಸಾಹಿತ್ಯಾಸಕ್ತರಾದ ಶಂಭುಲಿಂಗ ವಾಲ್ದೊಡ್ಡಿ, ಮಹೇಶ ಮಜಗೆ, ಹಂಸಕವಿ, ಶೈಲಜಾ ಹುಡಗೆ, ಕೀರ್ತಿಲತಾ ಹೊಸಳ್ಳಿ, ಮಹೇಶ್ವರಿ ಹೇಡೆ, ಸಿದ್ದಮ್ಮ ಹಳಕಾಯಿ, ನಾಗಯ್ಯ ಸ್ವಾಮಿ, ಜಗದೇವಿ ತಿಬಶೆಟ್ಟಿ, ಆರ್.ಎಸ್.ಬಿರಾದರ್, ಬಸವರಾಜ ಸಿಂದಬಂದಗೆ, ದಿನೇಶ ಕೊಂಡಾ ಸೇರಿ ಅನೇಕರು ಉಪಸ್ಥಿತರಿದ್ದರು. ಲಕ್ಷ್ಮಿ ಬಿರಾದರ್ ಸ್ವಾಗತಿಸಿದರು. ಸ್ವರೂಪರಾಣಿ ನಾಗೂರೆ ನಿರೂಪಿಸಿದರು. ಆಶಾ ಕೋಟೆ ವಂದಿಸಿದರು.

# ಎಸ್‌ಐಆರ್ ಪ್ರಕ್ರಿಯೆ ಕುರಿತು ಮತದಾರರ ಸಮಸ್ಯೆಗಳ ಪರಿಹಾರಕ್ಕೆ ಕಾವಲು ಸಮಿತಿ ರಚನೆ

**ಬೀದರ್: ಜು.16:**ಜಿಲ್ಲಾ ಮಟ್ಟದ ಎಸ್‌ಐಆರ್ ವಿರೋಧಿ ಜನಾಂದೋಲನ ಸಮಿತಿಯ ಸಭೆ ನಗರದ ಕರ್ನಾಟಕ ಸಾಹಿತ್ಯ ಸಂಘದ ಸಭಾಂಗಣದಲ್ಲಿ ಗುರುವಾರ ನಡೆಯಿತು. ಸಭೆಯಲ್ಲಿ ಬೀದರ್ ಜಿಲ್ಲೆಯಲ್ಲಿ ಎಸ್‌ಐಆರ್ (ವಿಶೇಷ ಸಮಗ್ರ ಪರಿಷ್ಕರಣೆ) ಪ್ರಕ್ರಿಯೆಯ ಪ್ರಗತಿ, ನ್ಯೂನತೆಗಳು ಹಾಗೂ ಮತದಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸವಿಸ್ತಾರವಾಗಿ ಚರ್ಚಿಸಿ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.



ಸಭೆಯಲ್ಲಿ ಗ್ರಾಮೀಣ ಪ್ರದೇಶಗಳ ಬೂತ್‌ಗಳು ಹಾಗೂ ನಗರ-ಪಟ್ಟಣಗಳ ವಾರ್ಡ್‌ಗಳಲ್ಲಿ ಮತದಾರರಿಗೆ ಎಸ್‌ಐಆರ್ ಅರ್ಜಿ ಭರ್ತಿ ಮಾಡಲು ಸಮಿತಿಯ ಸದಸ್ಯರು ನೆರವು ನೀಡಬೇಕು. ಅರ್ಜಿ ಸಲ್ಲಿಕೆಯಲ್ಲಿ ಎದುರಾಗುವ ಸಮಸ್ಯೆಗಳನ್ನು ಮೇಲಧಿಕಾರಿಗಳ ಗಮನಕ್ಕೆ ತಂದು ತಕ್ಷಣ ಪರಿಹರಿಸಲು ಕ್ರಮ ಕೈಗೊಳ್ಳಬೇಕು ಎಂದು ತೀರ್ಮಾನಿಸಲಾಯಿತು.

ಮತದಾರರು ಫಾರ್ಮ್ ಭರ್ತಿ ಮಾಡುವ ವೇಳೆ ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಜುಲೈ 17ರಂದು ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಚುನಾವಣಾ ಆಯೋಗ, ರಾಜ್ಯ ಚುನಾವಣಾ ಆಯೋಗ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲು ನಿರ್ಧರಿಸಲಾಯಿತು.

ಜುಲೈ 29ರಂದು ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕವಾಗಿದ್ದು, ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾಗಲಿದೆ. ಅನಕ್ಷರಸ್ಥರು, ಬಡವರು ಹಾಗೂ ಮಹಿಳೆಯರ ಬಳಿ ಚುನಾವಣಾ ಆಯೋಗ ಸೂಚಿಸಿರುವ 11 ದಾಖಲೆಗಳು ಲಭ್ಯವಿಲ್ಲದ ಕಾರಣ ಅವರಿಗೆ ನೆರವು ನೀಡುವ ಉದ್ದೇಶದಿಂದ ಜಿಲ್ಲಾ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ 'ಕಾವಲು ಸಮಿತಿ' ರಚಿಸಲು ಸಭೆ ತೀರ್ಮಾನಿಸಿತು.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಅಧ್ಯಕ್ಷ ಶ್ರೀಕಾಂತ ಸ್ವಾಮಿ ವಹಿಸಿದ್ದರು. ಸಂಚಾಲಕ ಓಂಪ್ರಕಾಶ ರೊಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಗದೀಶ್ವರ ಬಿರಾದಾರ ಸಭೆಯ ನಡಾವಳಿಯನ್ನು ವಾಚಿಸಿದರು.

ಸಭೆಯಲ್ಲಿ ಡಾ. ಮಕ್ಸೂದ್ ಚಂದಾ, ಅಬ್ದುಲ್ ಮನ್ನಾನ್ ಸೇಠ್, ವಿಠಲರಾವ ಪ್ಯಾಗೆ, ನಿಜಾಮುದ್ದೀನ್, ಬಾಲಾಜಿ ಕುಂಬಾರ, ಸಂತೋಷ ಜೋಳದಾಬಕೆ, ಮಹೇಶ್ ಗೋರನಾಳಕರ, ಸಿದ್ದು ಫುಲಾರಿ, ರಮೇಶ್ ಮಠಪತಿ, ಚೆನ್ನಬಸಯ್ಯ ಗಣಾಚಾರಿ, ಸಂದೀಪ್ ಮುಕುಂದೆ, ಮೊಹಮ್ಮದ್ ಫಯಾಜುದ್ದೀನ್, ಸುಂದರ ಜ್ಞಾನಿ, ಅಬ್ದುಲ್ ಸಮದ್, ಮೊಹಮ್ಮದ್ ಫಿರಾಸತ್ ಅಲಿ (ವಕೀಲರು), ಅರುಣ ಪಾಟೀಲ, ಡಾ. ಪೃಥ್ವಿರಾಜ, ಜಯವಂತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೀದರ್‌ನಲ್ಲಿ 19ರಂದು ಅದ್ದೂರಿ 'ಶ್ರೀ ಜಗನ್ನಾಥ ರಥಯಾತ್ರಾ ಮಹೋತ್ಸವ: ರಾಮಕೃಷ್ಣ ಸಾಳೆ

**ಬೀದರ್:ಜು.16:** ನಗರದ ಶ್ರೀ ಜಗನ್ನಾಥ ದೇವಸ್ಥಾನ (ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್) ವತಿಯಿಂದ ಇದೇ ಬರುವ ಜುಲೈ 19 2026 ರ ಭಾನುವಾರದಂದು 'ಶ್ರೀ ಜಗನ್ನಾಥ ರಥಯಾತ್ರಾ ಮಹೋತ್ಸವ'ವನ್ನು ಅತ್ಯಂತ ಭಕ್ತಿ ಹಾಗೂ ಸಡಗರದಿಂದ ಆಯೋಜಿಸಲಾಗಿದೆ. "ಜಗತ್ ಕೆ ನಾಥ್ ಶ್ರೀ ಜಗನ್ನಾಥ್" ಎಂಬ ಘೋಷಣೆಯೊಂದಿಗೆ ಜರುಗುವ ಈ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್ ನ ಕಾರ್ಯಕಾರಿ ಸಮಿತಿ ಸದಸ್ಯರಾದ ರಾಮಕೃಷ್ಣ ಸಾಳೆ ತಿಳಿಸಿದರು.



ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರಥಯಾತ್ರೆಯು ಜುಲೈ 19ರ ಭಾನುವಾರ ಬೆಳಿಗ್ಗೆ 11.30 ಗಂಟೆಗೆ ನಗರದ ರಾಂಪುರೆ ಕಾಲೋನಿಯಲ್ಲಿರುವ 'ಶ್ರೀ ಲಕ್ಷ್ಮಿ ಸತ್ಯನಾರಾಯಣ ದೇವಸ್ಥಾನ'ದಿಂದ ವಿಜೃಂಭಣೆಯಿಂದ ಪ್ರಾರಂಭವಾಗಲಿದೆ. ರಥಯಾತ್ರೆ ಪ್ರಾರಂಭವಾಗುವುದಕ್ಕಿಂತ ಮುಂಚೆಗೆ ಲಕ್ಷ್ಮೀ ನಾರಾಯಣ ದೇವಸ್ಥಾನದಲ್ಲಿ ಪೂಜೆ, ಅರ್ಚನೆ, ಪ್ರಾರ್ಥನೆ, ಗೋಪೂಜೆ, ಮಹಾಪ್ರಸಾದ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಈ ಭವ್ಯ ರಥಯಾತ್ರೆಯು ನಗರದ ಪ್ರಮುಖ ವೃತ್ತಗಳಾದ: ಬೊಮ್ಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ, ಭಗತ್ ಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಜಾನವಾಡ ರಸ್ತೆ ಮಾರ್ಗವಾಗಿ ಸಾಗಿ, ಅಂತಿಮವಾಗಿ ಚಿಕ್‌ಪೇಟ್–ಹೈದರಾಬಾದ್ ರಿಂಗ್ ರೋಡ್‌ನ ಮಾಮನ್‌ಕೇರಿಯಲ್ಲಿರುವ (ಜ್ಞಾನ ಸುಧಾ ಶಾಲೆ ಹತ್ತಿರ) 'ಶ್ರೀ ಜಗನ್ನಾಥ ದೇವಸ್ಥಾನ' (ನೀಲಾಚಲ್ ಧಾಮ್) ತಲುಪಲಿದೆ. ರಥಯಾತ್ರೆ ಸಂದರ್ಭದಲ್ಲಿ ಸಹಸ್ರಾರು ಶ್ರದ್ಧಾಳುಗಳು ರಥಯಾತ್ರೆಗೆ ಪುಷ್ಪಾರ್ಚನೆ ಮಾಡುವರು. ಮಹಾಪ್ರಸಾದ, ಜಲಪಾನ ಇತ್ಯಾದಿಗಳ ವ್ಯವಸ್ಥೆ ಮಾಡುವರು. ಬೆಳಿಗ್ಗೆ 11.30 ಗಂಟೆಗೆ ಪ್ರಾರಂಭವಾಗಿ ಸಾಯಂಕಾಲ 7.00 ವರೆಗೆ ಈ ರಥಯಾತ್ರೆ ಮೆರವಣಿಗೆ ಜರುಗುವುದು ಜಗನ್ನಾಥ ಮಂದಿರದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಶ್ರೀ ರಾಮನವಮಿ ಮಹೋತ್ಸವ, ಶ್ರೀ ನರಸಿಂಹ ಸ್ವಾಮಿ ಮಹೋತ್ಸವ, ರಥಯಾತ್ರಾ ಮಹೋತ್ಸವ, ಶ್ರೀ ಕೃಷ್ಣ ಜನ್ಮಾಷ್ಟಮಿ ಮಹೋತ್ಸವ, ರಾಧಾ ಅಷ್ಟಮಿ ಮಹೋತ್ಸವ, ಗೋವರ್ಧನ ಪೂಜಾ ಮಹೋತ್ಸವ, ದಾಮೋದರ ಪೂಜಾ ಮಹೋತ್ಸವ, ಗೌರ ಪೂರ್ಣಿಮಾ ಮಹೋತ್ಸವ, ಗೋವು ಪೂಜಾ ಮಹೋತ್ಸವ ಹೀಗೆ ಒಂಬತ್ತು ಮಹೋತ್ಸವಗಳು ಜರುಗಲಿವೆ. ಹಾಗೆ ಮಹಾಶಿವರಾತ್ರಿ ಮಹೋತ್ಸವ ಸಹ ಈ ಸಂದರ್ಭದಲ್ಲಿ ಜರುಗುವುದು. ಈ ಭವ್ಯ ರಥಯಾತ್ರೆಯಲ್ಲಿ ನೆರೆಯ ತೆಲಂಗಾಣ, ಮಹಾರಾಷ್ಟ್ರ, ಆಂಧ್ರ ಪ್ರದೇಶದಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ರಥಯಾತ್ರೆಯ ಶೋಭೆ ಹೆಚ್ಚಿಸುವರು. ಆದ್ದರಿಂದ ಸ್ಥಳೀಯ ಹಾಗೂ ಬೀದರ್ ಜಿಲ್ಲೆಯ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಭಗವಾನ ಜಗನ್ನಾಥನ ರಥವನ್ನು ಎಳೆಯುವ ಮೂಲಕ ಸ್ವಾಮಿಯ ಅಪಾರ ಕೃಪೆಗೆ ಪಾತ್ರರಾಗಬೇಕೆಂದು ಸಾಳೆ ತಿಳಿಸಿದರು.

ರೋಟ್ರಿ ಕ್ಲಬ್ ನ್ಯು ಸೆಂಚೂರಿಯ ವಿರಶೆಟ್ಟಿ ಮಣಿಗೆ ಈ ಸಂದರ್ಭದಲ್ಲಿ ಮಾತನಾಡಿ, ದೇವಸ್ಥಾನದಲ್ಲಿ ನಿರಂತರವಾಗಿ ಆರತಿ ಸೇವೆ, ಶೃಂಗಾರ ಸೇವೆ ಹಾಗೂ ಭೋಗ ಸೇವೆಗಳು ನಡೆಯುತ್ತಿರುತ್ತವೆ. ಪ್ರತಿ ಭಾನುವಾರ ಸುಮಾರು 600 ಜನರಿಗೆ 'ಅನ್ನದಾನ ಸೇವೆ' ಹಮ್ಮಿಕೊಳ್ಳಲಾಗುತ್ತಿದೆ. ಇದಲ್ಲದೆ, ಪ್ರತಿ ಭಾನುವಾರ ಸಂಜೆ 7.00 ಗಂಟೆಗೆ ದೇವಸ್ಥಾನದ ಆವರಣದಲ್ಲಿ 'ಭಗವದ್ಗೀತಾ ಮತ್ತು ಭಾಗವತ ಸತ್ಸಂಗ' ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದವರು ತಿಳಿಸಿದರು.

ಮಂದಿರದ ಪ್ರಮುಖರಲ್ಲೊಬ್ಬರಾದ ರಾಜಕುಮಾರ ಅಳ್ಳೆ ಮಾತನಾಡಿ, ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಈ ಸತ್ಕಾರ್ಯಕ್ಕೆ, 'ಶ್ರೀ ಜಗನ್ನಾಥ ನಿತ್ಯ ಸೇವೆ'ಯ ಮೂಲಕ ಆರ್ಥಿಕ ನೆರವು ನೀಡಲು ಇಚ್ಛಿಸುವ ದಾನಿಗಳು 'ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್'ಗೆ ತಮ್ಮ ಕೈಲಾದ ದೇಣಿಗೆ ನೀಡಿ ಸಹಕರಿಸಬಹುದು. ಹೆಚ್ಚಿನ ಮಾಹಿತಿಗಾಗಿ: 9341111690, 9901703583, 9448349440, 9448771617 ಸಂಪರ್ಕಿಸಬಹುದಾಗಿದೆ ಎಂದರು.

ಉದ್ಯಮಿ ಸೋಮಶೇಖರ ಪಾಟೀಲ್ ಗಾದಗಿ ಮಾತನಾಡಿದರು. ಬಿಜೆಪಿ ಹಿರಿಯ ಮುಖಂಡರು ಹಾಗೂ ಸ್ಥಳೀಯ ನಾಯಕರಾದ ಈಶ್ವರಸಿಂಗ್ ಠಾಕೂರ್, ಟ್ರಸ್ಟ್ ಪ್ರಮುಖರಾದ ಶಿವರಾಮ ಜೋಶಿ, ಅಭಿಷಕ ಆನಂದೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

ಜಗನ್ನಾಥ ಪೂರಿಯಲ್ಲಿನ ರಥ ಯಾತ್ರೆ ಮಾದರಿಯಲ್ಲಿ ಬೀದರ್ನಲ್ಲಿ ಜರುಗಲಿದೆ: ಈಶ್ವರಸಿಂಗ್ ಠಾಕೂರ್

ಬೀದರ್: ಪೂರಿ ಜಗನ್ನಾಥದಲ್ಲಿ ಇರುವ ಹಾಗೆ ಬೀದರ್ ನಲ್ಲೂ ಸಹ ಇದೇ ಮಾದರಿಯಲ್ಲಿ ಜಗನ್ನಾಥ ರಥಯಾತ್ರೆ ಜರುಗಲಿದೆ ಎಂದು ಬಿಜೆಪಿ ಹಿರಿಯ ಮುಖಂಡರು ಹಾಗೂ ಸ್ಥಳೀಯ ನಾಯಕರಾದ ಈಶ್ವರಸಿಂಗ್ ಠಾಕುರ್ ತಿಳಿಸಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಈ ತಿಂಗಳ 16ರಂದು ಪ್ರತಿ ವರ್ಷದಂತೆ ಈ ವರ್ಷ ಸಹ ಜಗನ್ನಾಥ ಪುರಿಯಲ್ಲಿ ಮೂರು ರಥಯಾತ್ರೆಗಳು ಜರುಗುತ್ತವೆ. ಒಂದು ಜಗನ್ನಾಥ ರಥಯಾತ್ರೆ, ಇನ್ನೊಂದು ಬಲಭದ್ರನ ರಥಯಾತ್ರೆ ಹಾಗೂ ಮತ್ತೊಂದು ಸುಭದ್ರ ತಾಯಿಯ ರಥ ಯಾತ್ರೆಗಳು ಜರುಗುತ್ತವೆ. ಜಗನ್ನಾಥ ರಥಯಾತ್ರೆಯ ಕುದುರೆಗಳು ಬಿಳಿ ಬಣ್ಣದಾಗಿದ್ದು, ಬಲಬದ್ರನ ರಥಯಾತ್ರೆಯ ಕುದುರೆಗಳು ಕಪ್ಪು ಬಣ್ಣದಾಗಿರುತ್ತವೆ. ಸುಭದ್ರ ತಾಯಿಯ ರಥಯಾತ್ರೆಯ ಕುದುರೆಗಳು ಕೆಂಪು ಬಣ್ಣದಾಗಿರುತ್ತವೆ. ಈ ರಥಯಾತ್ರೆ ಬೇಕಾಗುವ ಕಟ್ಟಿಗೆಯನ್ನು ಅಲ್ಲಿಯ ಆದಿವಾಸಿಗಳು ಬಸಂತ ಪಂಚಮಿ ದಿನದಂದು ಅರಣ್ಯಕ್ಕೆ ಹೋಗಿ ಹೊಸ ಕಟ್ಟಿಗೆಗಳನ್ನು ತಂದು ಕೊಡುವ ಸಂಪ್ರದಾಯ ಇದೆ. ಹಾಗೆ ಅಕ್ಷಯ ತೃತೀಯ ದಿವಸದಂದು ರಥಯಾತ್ರೆಯನ್ನು ನಿರ್ಮಿಸಲು ಪ್ರಾರಂಭಿಸಲಾಗುತ್ತದೆ. ರಥಯಾತ್ರೆಗೆ ಎಳೆಯಲ್ಲೂ ಬಳಿಸುವ ಹಗ್ಗವು ಹಿಂದೆ ಸಮುದ್ರ ಮಂಥನದಲ್ಲಿ ವಾಸುಕಿ ನಾಗ ಸರ್ಪವು ಹೋಲುವ ರೀತಿಯಲ್ಲಿ ಹಗ್ಗ ಬಳಿಸಲಾಗುತ್ತದೆ. ಈ ಮೂರು ರಥಯಾತ್ರೆಗಳನ್ನು ವಿಸರ್ಜಿಸಲಾಗುತ್ತದೆ. ಅವುಗಳಿಗೆ ಬಳಿಸಲಾದ ಕಟ್ಟಿಗೆಯಿಂದ ಆಗಮಿಸುವ ಲಕ್ಷಾವಧಿ ಭಕ್ತರಿಗೆ ಮಹಾಪ್ರಸಾದ ತಯಾರಿಸುವ ಕಾರ್ಯ ನಿರಂತರವಾಗಿ ಜರುಗುತ್ತ ಬರುತ್ತಿದೆ ಎಂದು ವಿವರಿಸಿದರು.

# ರಮಾಮಣಿ ಪ್ರಥಮ ದರ್ಜೆ ಕಾಲೇಜಿನ ಪದವಿ ಪ್ರದಾನ ಸಮಾರಂಭ



**ಕೋಲಾರ,ಜು,16–** ಇಂದಿನ ಯುವ ಪೀಳಿಗೆ ತಂತ್ರಜ್ಞಾನದ ಭರಾಟೆಗೆ ಸಿಕ್ಕಿ ಹಾಕಿಕೊಂಡಿದೆ, ಹಿಂದೆ ವಿಷಯ ಸಂಗ್ರಹಕ್ಕೆ ಕಷ್ಟವಿತ್ತು ಆದರೆ ಇಂದು ಎಲ್ಲಾ ಮಾಹಿತಿ ಕಣ್ಣ ಮುಂದೇಯೇ ಸಿಗುತ್ತಿದೆ, ವಿಧ್ಯಾರ್ಥಿಗಳಿಗೆ ಸುಲಭವಾಗಿ ಸಿಗುತ್ತಿರುವ ಈ ತಂತ್ರಜ್ಞಾನ ಶಿಕ್ಷಕರ ಬೋಧನೆಯ ಜತೆಗೆ ಊಟಕ್ಕೆ ಉಪ್ಪಿನ ಕಾಯಿ ಇದ್ದಂತೆ ಇರಬೇಕು ಆದರೆ ಅದೇ ಭ್ರಮೆಯಲ್ಲಿ ಮುಳುಗಿದರೆ ಅಪಾಯ ಖಚಿತ ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ ರವಿ ಎಚ್ಚರಿಸಿದರು.

ತಾಲ್ಲೂಕಿನ ಬೆಳ್ಳೂರಿನ ಶ್ರೀಮತಿ ರಮಾಮಣಿ ಸುಂದರ ರಾಜ ಅಯ್ಯಂಗಾರ್ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಪ್ರದಾನ ಸಮಾರಂಭ–2026ಕ್ಕೆ ಚಾಲನೆ ನೀಡಿ, ಪ್ರಮಾಣಪತ್ರ ವಿತರಿಸಿ ಅವರು ಮಾತನಾಡಿದರು.

ಇಂದು ತಂತ್ರಜ್ಞಾನದತ್ತ ಹೆಜ್ಜೆ ಹಾಕಿರುವ ಯುವಜನತೆ ಕೃತಕ ಬುದ್ದಿಮತ್ತೆ ಹಾಗೂ ತಂತ್ರಜ್ಞಾನದ ಭ್ರಮೆಯಲ್ಲಿ ಕಲಿಕೆ ಸಂಸ್ಕಾರ,ನೈತಿಕ ಮೌಲ್ಯಗಳಿಂದ ದೂರವಾಗುವುದನ್ನು ತಪ್ಪಿಸಲು ಶಿಕ್ಷಣ ಸಂಸ್ಥೆಗಳು ಹೆಚ್ಚಿನ ಮುತುವರ್ಜಿ ವಹಿಸಿ ಅಗತ್ಯ ಮಾರ್ಗದರ್ಶನ ನೀಡುವುದು ಅಗತ್ಯ ಎಂದರು.ಶಿಕ್ಷಣ ಸಂಸ್ಥೆ ಆರಂಭಿಸುವುದು ಅಷ್ಟು ಸುಲಭದ ಮಾತಲ್ಲ, ಇಂದು ಬದ್ದತೆ, ಕಲಿಸುವ ಹೊಣೆಗಾರಿಕೆ, ಗುಣಮಟ್ಟದ ಶಿಕ್ಷಣ ನೀಡುವ ಕೌಶಲ್ಯಭರಿತ ಶಿಕ್ಷಕ ವರ್ಗ, ಅಗತ್ಯ ಮೂಲಸೌಲಭ್ಯಗಳನ್ನು ಒಟ್ಟುಗೂಡಿಸಿಕೊಳ್ಳುವುದು ಕಷ್ಟದ ಕೆಲಸ ಇಂತಹ ಸಂದರ್ಭದಲ್ಲಿ ಇಲ್ಲಿ ಮೌಲ್ಯಾಧಾರಿತ ಶಿಕ್ಷಣ ನೀಡಲಾಗುತ್ತಿದೆ ಎಂದು ಶ್ಲಾಘಿಸಿದರು. Primary& Secondary Schooling (K–12)

ಮಕ್ಕಳ ಸಾಧನೆಯನ್ನು ಗುರುತಿಸಿ ಬೆನ್ನು ತಟ್ಟುವ ಕೆಲಸವು ಮುಂದಿನ ಪೀಳಿಗೆಗೆ ಹಾಗೂ ವಿಧ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದಂತೆ ಎಂದ ಅವರು, ಇಂತಹ ಪದವಿ ಪ್ರಮಾಣ ಕಾರ್ಯಕ್ರಮಗಳಿಂದಾಗಿ ನಾವೂ ಸಾಧಕರಂತೆ ಆಗಬೇಕು ಎಂದು ನಿರ್ಧರಿಸಿ ಪ್ರಯತ್ನಿಸುವ ಮನಸ್ಥಿತಿ ಮಕ್ಕಳಲ್ಲಿ ಬೆಳೆಸಿದಂತೆ ಆಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಂತ್ರಜ್ಞಾನ ಭರಾಟೆ ವೈಭವಿಕರಣ ಅಳವಡಿಸಿಕೊಳ್ಳಲು ನೀವು ಎಷ್ಟು ತಾಳ್ಮೆ ಬಳಸತ್ತೀರಿ ಎಂಬುದರ ಮೇಲೆ ಮುಂದಿನ ಭವಿಷ್ಯ ನಿಂತಿದೆ, ಶ್ರಮವಿಲ್ಲದೇ ಏನೇನ್ನಾದರೂ ಸಾಧಿಸಬಹುದು ಎಂದರೆ ಸಾಧ್ಯವಿಲ್ಲ ಎಂದರು.ಯುವ ಜನಾಂಗ ದೇಶದ ಭವಿಷ್ಯವಾಗಿದ್ದು, ಅವರನ್ನು ಸರಿದಾರಿಯಲ್ಲಿ ನಡೆಸುವ ಹೊಣೆ ಶಿಕ್ಷಣ ಸಂಸ್ಥೆಗಳ ಮೇಲಿದೆ, ಇಲ್ಲವಾದಲ್ಲಿ ದೇಶಕ್ಕೆ ಅದು ಆತಂಕವಾಗುತ್ತದೆ ಎಂದ ಅವರು, ಯುವಜನಾಂಗ ದುಶ್ಚಟಗಳಿಂದ ದೂರವಿರಿ ಎಂದು ಕಿವಿಮಾತಹ ಹೇಳಿದರು.

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವಾಣಿಜ್ಯ ಮತ್ತು ನಿರ್ವಹಣೆ ವಿಭಾಗದ ಡೀನ್ ಡಾ. ಖ ಮುರಳಿಧರ್ ಮಾತನಾಡಿ, ಪದವಿ ಶಿಕ್ಷಣದ ವಿಧಾನವೂ ಬದಲಾಗುತ್ತಿದೆ, ಪದವಿ ಜತೆಗೆ ಕೌಶಲ್ಯವನ್ನು ರೂಪಿಸಿಕೊಂಡಾಗ ಮಾತ್ರವೇ ನಿಮ್ಮ ಜೀವನದ ಹಾದಿ ಸುಗಮವಾಗಲಿದೆ ಎಂದು ತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿಕೆಎಸ್‌ಎಸ್ ಟ್ರಸ್ಟ್‌ನ ವ್ಯವಸ್ಥಾಪಕ ಟ್ರಸ್ಟಿ ಶರಣ್ ಕುಮಾರ್ ಆರ್. ಮಾತನಾಡಿ, ಟ್ರಸ್ಟ್ ಉಚಿತ ಶಿಕ್ಷಣದ ಧ್ಯೇಯ ಹೊಂದಿದೆ ಜತೆಗೆ ಈ ಭಾಗದ ಗ್ರಾಮೀಣ ಜನತೆಗೆ ಉಚಿತ ಆರೋಗ್ಯ ಸೌಲಭ್ಯವನ್ನು ಒದಗಿಸುತ್ತಿದೆ ಮತ್ತು ಯೋಗ ಜೀವನದ ಪಾಠ ಕಲಿಸುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ದೀಪ ಬೆಳಗಿ, ಯೋಗ ಮತ್ತು ಭರತನಾಟ್ಯ ಪ್ರದರ್ಶನದ ಮೂಲಕ ಸಮಾರಂಭಕ್ಕೆ ಚಾಲನೆ ನೀಡಲಾಯಿತು.ಸಾಂಪ್ರದಾಯಿಕ ಉಡುಗೆಯಲ್ಲಿ ಶೋಭಿಸಿದ ಪದವೀಧರರು ಸಂಪ್ರದಾಯಬದ್ಧವಾಗಿ ಜ್ಞಾನದ ಪ್ರತೀಕವಾದ ದೀಪ ಬೆಳಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಪದವಿ ಪ್ರಮಾಣ ಪತ್ರ ಸ್ವೀಕರಿಸಿ ಸಂಭ್ರಮಿಸಿದರು. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ವೈವಿಧ್ಯತೆ ಮೆರಗು ನೀಡಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಛಾಯಾದೇವಿ, ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ಆಡಳಿತ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಜಮಖಂಡಿ ಉಪವಿಭಾಗದ ಪೊಲೀಸ್ ಠಾಣೆಗಳಿಗೆ ಬೆಳಗಾವಿ ಉತ್ತರ ವಲಯ ಐಜಿಪಿ ಸಂದೀಪ್ ಪಾಟೀಲ ಭೇಟಿ ಕಾರ್ಯವೈಖರಿ ಪರಿಶೀಲನೆ

**ಜಮಖಂಡಿ | ಜು 16:** ಬಾಗಲಕೋಟೆ ಜಿಲ್ಲೆಯ ಜಮಖಂಡಿ ಉಪವಿಭಾಗದ ಡಿವೈಎಸ್ಪಿ ಕಚೇರಿ, ಸರ್ಕಲ್ ಇನ್ಸ್ಪೆಕ್ಟರ್ ಕಚೇರಿ ಹಾಗೂ ಗ್ರಾಮೀಣ ಪೊಲೀಸ್ ಠಾಣೆಗೆ ಬೆಳಗಾವಿ ಉತ್ತರ ವಲಯದ ಐಜಿಪಿ ಸಂದೀಪ್ ಪಾಟೀಲ ಭೇಟಿ ನೀಡಿ ಪೊಲೀಸ್ ಇಲಾಖೆಯ ಕಾರ್ಯವೈಖರಿ ಹಾಗೂ ಆಡಳಿತಾತ್ಮಕ ವ್ಯವಸ್ಥೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿದರು.ಈ ಸಂದರ್ಭದಲ್ಲಿ ವಿವಿಧ ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾಗಿರುವ ವಾಹನಗಳನ್ನು, ಪ್ರಕರಣಗಳಿಗೆ ಸಂಬಂಧಿಸಿದ ದಾಖಲೆಗಳು, ಕಡತಗಳು ಹಾಗೂ ತನಿಖೆಯ ಪ್ರಗತಿಯನ್ನು ಐಜಿಪಿ ಪರಿಶೀಲಿಸಿದರು. ಅಧಿಕಾರಿಗಳಿಗೆ ಪ್ರಕರಣಗಳ ತ್ವರಿತ ವಿಲೇವಾರಿ, ದಾಖಲೆಗಳ ಸಮರ್ಪಕ ನಿರ್ವಹಣೆ ಹಾಗೂ ಸಾರ್ವಜನಿಕ ಸ್ನೇಹಿ ಪೊಲೀಸ್ ಸೇವೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು.



ಬಳಿಕ ಠಾಣೆ ಆವರಣದಲ್ಲಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಇದೇ ವೇಳೆ ಪೊಲೀಸ್ ವಸತಿ ನಿಲಯಕ್ಕೂ ಭೇಟಿ ನೀಡಿ ಅಲ್ಲಿನ ಮೂಲಸೌಕರ್ಯಗಳನ್ನು ಪರಿಶೀಲಿಸಿದ ಐಜಿಪಿ, ನೂತನ ಪೊಲೀಸ್ ವಸತಿ ನಿಲಯ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.ನಗರದಲ್ಲಿ ಪ್ರತ್ಯೇಕ ಟ್ರಾಫಿಕ್ ಪೊಲೀಸ್ ಠಾಣೆ ಮಂಜೂರಾಗುವವರೆಗೆ, ಲಭ್ಯವಿರುವ ಸಿಬ್ಬಂದಿಯನ್ನು ಟ್ರಾಫಿಕ್ ಕರ್ತವ್ಯಕ್ಕೆ ನಿಯೋಜಿಸಿ ವಾಹನ ಸಂಚಾರವನ್ನು ಸುಗಮವಾಗಿ ನಿಯಂತ್ರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಡಿವೈಎಸ್ಪಿ ಸಯ್ಯದ್ ರೋಶನ್ ಜಮೀರ್, ಸಿ.ಪಿ.ಐ ಮಲ್ಲಪ್ಪ ಮಡ್ಡಿ, ಪಿ.ಎಸ್.ಐಗಳಾದ ಗಂಗಾಧರ ಪೂಜೇರಿ, ಅನೀಲ ಕುಂಬಾರ, ಅಪರಾಧ ವಿಭಾಗದ ಪಿ.ಎಸ್.ಐ ಪಿ.ಎನ್. ವಾಲೇಕಾರ ಸೇರಿದಂತೆ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಶೆಹ್ನಾಜ್ –ರಾಘವ್ ಡೇಟಿಂಗ್ ವದಂತಿ: ನಟಿಯ ಸ್ಪಷ್ಟನೆ

**ಮುಂಬೈ, ಜು. 16–** ಪಂಜಾಬ್‌ನ ರಾಣಿ ಎಂದೇ ಖ್ಯಾತರಾಗಿರುವ ನಟಿ ಶೆಹ್ನಾಜ್ ಗಿಲ್, ಪ್ರಸ್ತುತ ತಮ್ಮ ಮುಂಬರುವ ಚಿತ್ರ "ಇಷ್ಕನಾಮಾ" ಮತ್ತು ನಟ ರಾಘವ್ ಜುಯಾಲ್ ಜೊತೆಗಿನ ಡೇಟಿಂಗ್ ವದಂತಿಗಳಿಂದಾಗಿ ಸುದ್ದಿಯಲ್ಲಿದ್ದಾರೆ. ಇತ್ತೀಚೆಗೆ 'ಇಷ್ಕನಾಮಾ' ಚಿತ್ರದ ಟ್ರೇಲರ್ ಬಿಡುಗಡೆಯಾಗಿದ್ದು, ಶೆಹ್ನಾಜ್ ಅದರ ಪ್ರಚಾರ ಕಾರ್ಯಗಳಲ್ಲಿ ಬ್ಯುಸಿಯಾಗಿದ್ದಾರೆ.ಇದೇ ವೇಳೆ ನಡೆದ ಸಂದರ್ಶನವೊಂದರಲ್ಲಿ, ಶೆಹ್ನಾಜ್ ಅವರು ರಾಘವ್ ಜುಯಾಲ್ ಜೊತೆಗಿನ ತಮ್ಮ ಸಂಬಂಧದ ವದಂತಿಗಳ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ.

**ರಾಘವ್ ಕೇವಲ ಆಪ್ತ ಸ್ನೇಹಿತ!**

ರಾಘವ್ ಜೊತೆಗಿನ ಡೇಟಿಂಗ್ ವದಂತಿಗಳಿಗೆ ಪ್ರತಿಕ್ರಿಯಿಸಿದ ನಟಿ:

"ರಾಘವ್ ನನ್ನ ತುಂಬಾ ಆಪ್ತ ಸ್ನೇಹಿತ. ನನ್ನ ಸ್ನೇಹಿತನ ಹೊಸ ಚಿತ್ರ ಬಿಡುಗಡೆಯಾಗುತ್ತಿದೆ, ದಯವಿಟ್ಟು ಆ ಚಿತ್ರಕ್ಕೆ ಬೆಂಬಲ ನೀಡಿ. ನನ್ನ ಸ್ನೇಹಿತನ ಸಿನಿಮಾ ಯಶಸ್ವಿಯಾಗಬೇಕು," ಎಂದು ಕೋರಿದ್ದಾರೆ.

ಈ ಪ್ರಣಯದ ವರದಿಗಳ ಬಗ್ಗೆ ರಾಘವ್ ಜುಯಾಲ್ ಇದುವರೆಗೆ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

ವೈಯಕ್ತಿಕ ಜೀವನ ಮತ್ತು ನಂಬಿಕೆಯ ಬಗ್ಗೆ ಶೆಹ್ನಾಜ್ ಮಾತು

ತಮ್ಮ ಖಾಸಗಿ ಜೀವನದ ಬಗ್ಗೆ ಚರ್ಚಿಸಿದ ಶೆಹ್ನಾಜ್, ತಮಗೆ ಗೌಪ್ಯತೆಯ ಅಗತ್ಯವಿದೆ ಎಂದು ತಿಳಿಸಿದ್ದಾರೆ:

"ನನಗೆ ಗೌಪ್ಯತೆ ಬೇಕು, ಆದರೆ ಅದು ನನ್ನ ವೈಯಕ್ತಿಕ ಜೀವನದಲ್ಲಿ ಮಾತ್ರ. ನಾನು ಯಾವಾಗಲೂ ನನ್ನ ಖಾಸಗಿ ವಿಷಯಗಳನ್ನು ರಹಸ್ಯವಾಗಿಡಲು ಬಯಸುತ್ತೇನೆ. ಜನರು ಯಾವಾಗಲೂ ತಮಗೆ ಕಾಣಿಸದ ಜಾಗ ಇಣುಕಿ ನೋಡಲು ಯತ್ನಿಸುತ್ತಾರೆ."

ಜೊತೆಗೆ, ತಮಗೆ ಜನರನ್ನು ಸುಲಭವಾಗಿ ನಂಬಲು ಸಾಧ್ಯವಾಗುವುದಿಲ್ಲ ಎಂಬ ವಿಷಯವನ್ನೂ ಅವರು ಹಂಚಿಕೊಂಡಿದ್ದಾರೆ. "ಜೀವನದಲ್ಲಿ ನಂಬಿಕೆ ಪದೇ ಪದೇ ಮುರಿದಾಗ, ಮತ್ತೆ ಯಾರನ್ನಾದರೂ ನಂಬುವುದು ತುಂಬಾ ಕಷ್ಟವಾಗುತ್ತದೆ," ಎಂದು ಅವರು ತಮ್ಮ ನಂಬಿಕೆಯ ಸಮಸ್ಯೆಗಳ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ.



**ವದಂತಿಗಳ ಹಿನ್ನೆಲೆ:** 2023 ರಲ್ಲಿ "ಕಿಸಿ ಕಾ ಭಾಯಿ ಕಿಸಿ ಕಿ ಜಾನ್ ಚಿತ್ರದ ಚಿತ್ರೀಕರಣದ ಸಮಯದಲ್ಲಿ ರಾಘವ್ ಜುಯಾಲ್ ಮತ್ತು ಶೆಹನಾಜ್ ಗಿಲ್ ಪರಸ್ಪರ ಹತ್ತಿರವಾಗಿದ್ದರು ಎನ್ನಲಾಗಿದೆ. ಅಂದಿನಿಂದಲೇ ಇವರ ಪ್ರಣಯದ ವದಂತಿಗಳು ಹರಡಲು ಪ್ರಾರಂಭಿಸಿದವು. ತದನಂತರ ಇಬ್ಬರೂ ಹಲವು ಪಾರ್ಟಿಗಳು, ಡಿನ್ನರ್‌ಗಳು ಹಾಗೂ ಪ್ರವಾಸಗಳಲ್ಲಿ ಒಟ್ಟಿಗೆ ಕಾಣಿಸಿಕೊಂಡಿದ್ದು ಈ ವದಂತಿಗಳಿಗೆ ಮತ್ತಷ್ಟು ರೆಕ್ಕೆಪುಕ್ಕ ನೀಡಿತು.

ಆದಾಗ್ಯೂ, ರಾಘವ್ ಅಥವಾ ಶೆಹನಾಜ್ ಇಬ್ಬರೂ ತಮ್ಮ ಸಂಬಂಧವನ್ನು ಅಧಿಕೃತವಾಗಿ ಒಪ್ಪಿಕೊಂಡಿಲ್ಲ. ಅವರು ಯಾವಾಗಲೂ ಪರಸ್ಪರರನ್ನು 'ಒಳ್ಳೆಯ ಸ್ನೇಹಿತರು' ಎಂದೇ ಬಣ್ಣಿಸುತ್ತಾ ಬಂದಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE